ಸಂಪುಟ 01 | ಸಂಚಿಕೆ 76 | ಬುಧವಾರ 28 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE
ಸತ್ಯದ ದಿಕ್ಕು TRUE PATH
ಕನ್ನಡ ದಿನ ಪತ್ರಿಕೆ
ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ
REGIONAL KANNADA DAILY MORNING
RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಲಾಲಾ ಲಜಪತ್ ರಾಯ್ ಅವರ ಜನ್ಮ ವಾರ್ಷಿಕೋತ್ಸವ**

ಲಾಲಾ ಲಜಪತ್ ರಾಯ್ ಜನವರಿ 28, 1865 ರಂದು ಪಂಜಾಬ್‌ನಲ್ಲಿ ಜನಿಸಿದರು. ಅವರು ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಪ್ರಮುಖ ಪಾತ್ರ ವಹಿಸಿದ ಪ್ರಮುಖ ರಾಷ್ಟ್ರೀಯತಾವಾದಿ ನಾಯಕರಾಗಿದ್ದರು. ಅವರು 'ಪಂಜಾಬ್ ಕೇಸರಿ' ಅಥವಾ 'ಪಂಜಾಬ್ ಸಿಂಹ' ಎಂಬ ಬಿರುದನ್ನು ಸಹ ಗಳಿಸಿದರು. ಅವರು ಪಂಜಾಬ್ ರಾಷ್ಟ್ರೀಯ ಬ್ಯಾಂಕಿನ ಸ್ಥಾಪನೆಗೆ ನಾಂದಿ ಹಾಡಿದರು. ಗಂಭೀರ ಗಾಯಗಳಿಂದಾಗಿ ಅವರು 1928 ರ ನವೆಂಬರ್ 17 ರಂದು ನಿಧನರಾದರು. ಹರಿಯಾಣದ ಹಿಸಾರ್‌ನಲ್ಲಿರುವ ಪಶುವೈದ್ಯಕೀಯ ಮತ್ತು ಪ್ರಾಣಿ ವಿಜ್ಞಾನ ವಿಶ್ವವಿದ್ಯಾಲಯಕ್ಕೆ ಲಾಲಾ ಲಜಪತ್ ರಾಯ್ ಅವರ ಹೆಸರನ್ನು ಇಡಲಾಗಿದೆ

**2) ಕೆ.ಎಂ. ಕಾರ್ಯಪ್ಪ ಜಯಂತಿ**

ಭಾರತೀಯ ಮತ್ತು ವಿಶ್ವ ಇತಿಹಾಸದಲ್ಲಿ ಜನವರಿ 28 ಅನ್ನು ವಿವಿಧ ಕಾರಣಗಳಿಗಾಗಿ ಆಚರಿಸಲಾಗುತ್ತದೆ, ಆಚರಿಸಲಾಗುತ್ತದೆ ಮತ್ತು ಸ್ಮರಿಸಲಾಗುತ್ತದೆ, ಮತ್ತು ಅವುಗಳಲ್ಲಿ ಒಂದು ಕೊಡಂದೇರ ಮಾದಪ್ಪ ಕಾರ್ಯಪ್ಪ ಅವರ ಜನ್ಮ ದಿನಾಚರಣೆಯಾಗಿದೆ. ಅವರು ಭಾರತೀಯ ಸೇನೆಯ ಮೊದಲ ಕಮಾಂಡರ್-ಇನ್-ಚೀಫ್ ಆಗಿದ್ದರು. ಮತ್ತು ಇಂದು ನಾವು ಅವರ 124 ನೇ ಜನ್ಮ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ.

## ಸುಭಾಷಿತ

ಮುಕ್ತ ವಾತಾವರಣದಲ್ಲಿ ಕೆಲಸ ಮಾಡುವವರು ಮಾತ್ರ ಶ್ರೇಷ್ಠ ವಿಚಾರಗಳನ್ನು ಸೃಷ್ಟಿಸಬಲ್ಲರು.

ಆಲ್ಬರ್ಟ್ ಐನ್‌ಸ್ಟೀನ್

ನೈಜ್ಯ ದೆಸೆ ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಪಶ್ಚಿಮ ಬಂಗಾಳದಲ್ಲಿ ನಿಫಾ ವೈರಸ್ ಪ್ರಕರಣಗಳು ಬೆಳಕಿಗೆ, ವಿಮಾನ ನಿಲ್ದಾಣಗಳಲ್ಲಿ ಅಲರ್ಟ್

**ಕೋಲ್ಕತ್ತಾ: ಬಂಗಾಳದಲ್ಲಿ ನಿಫಾ ವೈರಸ್ ಪ್ರಕರಣಗಳು ಬೆಳಕಿಗೆ ಬರುತ್ತಿದ್ದಂತೆ, ಈ ಪ್ರದೇಶದ ದೇಶಗಳು ಅಂತರರಾಷ್ಟ್ರೀಯ ವಿಮಾನ ನಿಲ್ದಾಣಗಳಲ್ಲಿ ಸಾರ್ವಜನಿಕ ಆರೋಗ್ಯ ಕ್ರಮಗಳನ್ನು ಪುನರುಜ್ಜೀವನಗೊಳಿಸುತ್ತಿವೆ, ಇದು ಭಾರತದ ಸುತ್ತಮುತ್ತಲ ರಾಷ್ಟ್ರಗಳ ಭೀತಿಗೆ ಕಾರಣವಾಗಿದೆ.**

ಬಂಗಾಳದಲ್ಲಿ ಕೇವಲ 2 ಪ್ರಕರಣಗಳು ದೃಢಪಟ್ಟಿವೆ ಮತ್ತು ಇಲ್ಲಿಯವರೆಗೆ ಒಟ್ಟು 5 ಶಂಕಿತ ಪ್ರಕರಣಗಳಿವೆ, ಆದರೆ ಕಳೆದ ಕೆಲವು ವಾರಗಳಲ್ಲಿ ಸಂಭಾವ್ಯ ನಿಪಾ ವೈರಸ್ ಹರಡುವಿಕೆಯ ವಿರುದ್ಧ ಕಠಿಣ ಕ್ರಮಗಳನ್ನು ಕಂಡಿವೆ, ವಿಶೇಷವಾಗಿ ನೆರೆಯ ರಾಜ್ಯವಾದ ಒಡಿಶಾ ಮತ್ತು ಕೇರಳದಲ್ಲಿ (ಈ ರೋಗವನ್ನು ಸ್ಥಳೀಯವೆಂದು ಪರಿಗಣಿಸಲಾಗಿದೆ). ನಿಪಾ ಹಣ್ಣಿನ ಬಾವಲಿಗಳು ನೈಸರ್ಗಿಕವಾಗಿ ಸಾಗಿಸುವ ಪ್ರಾಣಿಜನ್ಯ ರೋಗಕಾರಕವಾಗಿದ್ದು, ಕಲುಷಿತ ಆಹಾರ, ಪ್ರಾಣಿಗಳು ಮತ್ತು ವ್ಯಕ್ತಿಯಿಂದ ವ್ಯಕ್ತಿಗೆ ನಿಕಟ ಸಂಪರ್ಕದ ಮೂಲಕ ಹರಡುವ ಸಾಮರ್ಥ್ಯವನ್ನು ಹೊಂದಿದೆ.

ಈ ವೈರಸ್ ತೀವ್ರ ಉಸಿರಾಟದ ಕಾಯಿಲೆ ಮತ್ತು ತೀವ್ರವಾದ ಎನ್ಸೆಫಾಲಿಟಿಸ್‌ಗೆ ಕಾರಣವಾಗಬಹುದು ಮತ್ತು ಏಕಾಏಕಿ ಮತ್ತು




ಸ್ಥಳೀಯ ಆರೋಗ್ಯ ರಕ್ಷಣಾ ಸಾಮರ್ಥ್ಯವನ್ನು ಅವಲಂಬಿಸಿ ಸುಮಾರು 40% ರಿಂದ 75% ವರೆಗೆ ಐತಿಹಾಸಿಕವಾಗಿ ಹೆಚ್ಚಿನ ಪ್ರಕರಣ-ಸಾವಿನ ಪ್ರಮಾಣವನ್ನು ಹೊಂದಿದೆ. ಕೋವಿಡ್-19 ಗಿಂತ ಭಿನ್ನವಾಗಿ, ಇದು ವಿಶಾಲ ಜನಸಂಖ್ಯೆಯಲ್ಲಿ ವಾಯುಗಾಮಿ ಹನಿಗಳ ಮೂಲಕ ಸುಲಭವಾಗಿ ಹರಡುತ್ತದೆ ಮತ್ತು ದೊಡ್ಡ ಪ್ರಮಾಣದ ಜಾಗತಿಕ ಹರಡುವಿಕೆಗೆ ಕಾರಣವಾಯಿತು, ನಿಪಾ ಹರಡುವಿಕೆಯು ಹೆಚ್ಚು ಸೀಮಿತವಾಗಿದೆ ಮತ್ತು ಸೋಂಕಿತ ಮೂಲಗಳೊಂದಿಗೆ ನೇರ ಸಂಪರ್ಕಕ್ಕೆ ಸಂಬಂಧಿಸಿದೆ. ಆದರೂ, ರೋಗದ ತೀವ್ರತೆ ಮತ್ತು ವ್ಯಾಪಕವಾಗಿ ಲಭ್ಯವಿರುವ ಲಸಿಕೆ ಅಥವಾ ನಿರ್ದಿಷ್ಟ ಚಿಕಿತ್ಸೆಯ ಅನುಪಸ್ಥಿತಿಯು ಅಂತರರಾಷ್ಟ್ರೀಯ ಆರೋಗ್ಯ ಅಧಿಕಾರಿಗಳ ಎಚ್ಚರಿಕೆಯ ಕಣ್ಗಾವಲುಗೆ ಕಾರಣವಾಗಿದೆ.

ಪಶ್ಚಿಮ ಬಂಗಾಳ ಏಕಾಏಕಿ ಪ್ರತಿಕ್ರಿಯೆಯಾಗಿ, ಥೈಲ್ಯಾಂಡ್, ನೇಪಾಳ ಮತ್ತು ತೈವಾನ್ ಸೇರಿದಂತೆ ದೇಶಗಳು ಹೆಚ್ಚಿನ ಅಪಾಯದ ಪ್ರದೇಶಗಳಿಂದ, ವಿಶೇಷವಾಗಿ ಪಶ್ಚಿಮ ಬಂಗಾಳದಿಂದ ಬರುವ ಪ್ರಯಾಣಿಕರಿಗೆ ಉದ್ದೇಶಿತ ಆರೋಗ್ಯ ತಪಾಸಣೆಗಳನ್ನು ಘೋಷಿಸಿವೆ. ಕೋವಿಡ್ -19 ಸಾಂಕ್ರಾಮಿಕ ಸಮಯದಲ್ಲಿ ಅಭಿವೃದ್ಧಿಪಡಿಸಿದ ಚೌಕಟ್ಟುಗಳಿಂದ ಅಳವಡಿಸಿಕೊಂಡ ಈ ತಪಾಸಣೆಗಳು, ಸಂಭಾವ್ಯ ಸೋಂಕಿತ ಪ್ರಯಾಣಿಕರನ್ನು ಮೊದಲೇ ಗುರುತಿಸುವುದು, ಅಗತ್ಯವಿದ್ದರೆ ತ್ವರಿತ ಪ್ರತ್ಯೇಕತೆಯನ್ನು ಬೆಂಬಲಿಸುವುದು ಮತ್ತು ಗಡಿಯಾಚೆಗಿನ ಹರಡುವಿಕೆಯ ಅಪಾಯವನ್ನು ಕಡಿಮೆ ಮಾಡುವ ಗುರಿಯನ್ನು ಹೊಂದಿವೆ. ವೈರಸ್ ಹಿನ್ನೆಲೆ: ನಿಪಾ ವೈರಸ್ ಹೆನಿಪಾವೈರಸ್ ಆಗಿದ್ದು, ಇದನ್ನು ಮೊದಲು 1999 ರಲ್ಲಿ ಮಲೇಷ್ಯಾದಲ್ಲಿ ಗುರುತಿಸಲಾಯಿತು. ಇದು ಸೋಂಕಿತ ಪ್ರಾಣಿಗಳ ಸಂಪರ್ಕದ ಮೂಲಕ, ವಿಶೇಷವಾಗಿ ಪ್ಟೆರೋಪಸ್ ಕುಟುಂಬದ ಹಣ್ಣಿನ ಬಾವಲಿಗಳು, ಕಚ್ಚಾ ಖರ್ಜೂರದ ರಸದಂತಹ ಕಲುಷಿತ ಆಹಾರ ಅಥವಾ ಸೋಂಕಿತ ವ್ಯಕ್ತಿಯಿಂದ ಸಾಂಕ್ರಾಮಿಕ ದೈಹಿಕ ದ್ರವಗಳೊಂದಿಗೆ ನಿಕಟ ಸಂಪರ್ಕದ ಮೂಲಕ ಹರಡುತ್ತದೆ. ಲಕ್ಷಣಗಳು: ಸಾಮಾನ್ಯವಾಗಿ ಇವುಗಳಿಂದ ಪ್ರಾರಂಭವಾಗುತ್ತವೆ:ಜ್ವರ, ತಲೆನೋವು, ಸ್ನಾಯು ನೋವು, ಗಂಟಲು ನೋವು ಈ ಸೋಂಕಿನ ಲಕ್ಷಣಗಳು.

# ಕಾಂಗ್ರೇಸ್ ಮುಖಂಡ ರಾಜೀವ್ ಗೌಡಗೆ 14 ದಿನ ನ್ಯಾಯಾಂಗ ಬಂಧನ.!

❑ ನೈಜ್ಯ ದೆಸೆ ನ್ಯೂಸ್

**ಶಿಡ್ಲಘಟ್ಟ: ನಗರಸಭೆ ಪೌರಾಯುಕ್ತೆ ಅಮೃತ ಜಿ ಅವರಿಗೆ ಬೆದರಿಕೆ ಹಾಕಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜೀವ್ ಗೌಡನನ್ನು ಬಂಧಿಸಿ ಮಂಗಳವಾರದಂದು ಪೊಲೀಸರು ಬಿಗಿಬಂದೋಬಸ್ತ್ ಮೂಲಕ ಆರೋಪಿ ರಾಜೀವ್ ಗೌಡನನ್ನು ಸಮಯ ಸುಮಾರು ಮದ್ಯಾಹ್ನ 3:00 ವೇಳೆಗೆ ನ್ಯಾಯಾಲಯದ ಮುಂದೆ ಹಾಜರುಪಡಿಸಿದರು.**

ಕಳೆದ 13 ದಿನಗಳಿಂದ ನಾಪತ್ತೆಯಾಗಿದ್ದ ರಾಜೀವ್ ಗೌಡನನ್ನು ಪೊಲೀಸರು ಸೋಮವಾರ ಸಂಜೆ ಕೇರಳದ ಗಡಿಭಾಗದಲ್ಲಿ ಬಂಧನಮಾಡಿ ವಶಕ್ಕೆ ಪಡೆದಿದ್ದರು. ಸುಧೀರ್ಘ ವಿಚಾರಣೆ



ನಡೆಸಿ ಎಲ್ಲಾ ಕಾನೂನು ಪ್ರಕ್ರಿಯೆಗಳು ನಡೆಸಿ ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಯಲ್ಲಿ ಆರೋಗ್ಯ ತಪಾಸಣೆ ನಡೆಸಿದ ನಂತರ ಶಿಡ್ಲಘಟ್ಟದ ಜೆಎಂಎಫ್ ಸಿ ನ್ಯಾಯಾಲಯಕ್ಕೆ ಕರೆತರಲಾಯಿತು. ರಾಜೀವ್ ಗೌಡ ಪರ ವಕೀಲರಾದ ವಿವೇಕ್ ಸುಬ್ಬಾರೆಡ್ಡಿ



ಅವರು ವಕಾಲತ್ತು ವಹಿಸಿ ಜಾಮೀನು ಅರ್ಜಿ ಸಲ್ಲಿಸಿ ವಾದ ಮಂಡಿಸಿದರು. ಸರ್ಕಾರದ ಅಭಿಯೋಜಕರು ಪ್ರತಿವಾದ ಮಂಡಿಸಿ ಅಕ್ಷೇಪಣೆ ಸಲ್ಲಿಸಿದರು.

ಹೆಚ್ಚಿನ ವಿಚಾರಣೆಗೆ ಪೊಲೀಸ್ ಕಸ್ಟಡಿಗೆ ನೀಡುವಂತೆ ನ್ಯಾಯಾಲಯಕ್ಕೆ ಮನವಿ ಮಾಡಲಾಯಿತು. ಘನ ನ್ಯಾಯಾಲಯವು ಮದ್ಯಂತರ ಜಾಮೀನು ಅರ್ಜಿಯನ್ನು ರದ್ದುಗೊಳಿಸಿ 14 ದಿನಗಳು ನ್ಯಾಯಾಂಗ ಬಂಧನಕ್ಕೆ ನೀಡಲಾಯಿತು. ಬುಧವಾರದಂದು ರೆಗ್ಯೂಲರ್ ಬೇಲ್ ಅರ್ಜಿಯ ವಿಚಾರಣೆ ಮುಂದೂಡಿದೆ. ರಾಜೀವ್ ಗೌಡಗೆ ರಕ್ಷಣೆ ನೀಡಿದ್ದ ಉದ್ಯಮಿ ಮೈಕಲ್ ಗೆ ನ್ಯಾಯಾಲಯವು ಜಾಮೀನು ನೀಡಿದೆ.

ಸುದ್ದಿಗಾರರೊಂದಿಗೆ ವಿವೇಕ್ ಸುಬ್ಬಾರೆಡ್ಡಿ ಅವರು ಮಾತನಾಡಿ ಜಾಮೀನು ರಹಿತ ಸೆಕ್ಷನ್ ಪೊಲೀಸರು ಹಾಕಿದ್ದಾರೆ. ನ್ಯಾಯಾಲಯದ ಮುಂದೆ ವಾದವನ್ನ ಮಂಡಿಸಿದ್ದೇವೆ. ಪೊಲೀಸರು ಕಸ್ಟಡಿಗೆ ಕೊಡುವಂತೆ ಕೇಳಿದರು. ಇದನ್ನು ನ್ಯಾಯಾಲಯ ತಿರಸ್ಕರಿಸಿ ನ್ಯಾಯಾಂಗ ಬಂಧನಕ್ಕೆ ನೀಡಿದೆ.

# ಗೆಜ್ಜೆ ಭಾವಿ.77ನೇ ಗಣರಾಜ್ಯೋತ್ಸವ ಶಾಲಾಮಕ್ಕಳಿಗೆ ವಿವಿಧ ಸ್ಪರ್ಧೆ ಯುವ ಟೀಮ್ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ಅರಕೇರಾ: ತಾಲೂಕಿನ ಗೆಜ್ಜೆ ಭಾವಿ ಗ್ರಾಮದಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಯಲ್ಲಿ 77 ನೇ ಗಣರಾಜ್ಯೋತ್ಸವ ಕಾರ್ಯಕ್ರಮ ಜರುಗಿತು. ಯುವ ಟೀಮವತಿಯಿಂದ ಗಣರಾಜ್ಯೋತ್ಸವ ಅಂಗವಾಗಿ ಶಾಲಾಮಕ್ಕಳಿಗೆ ಆಟೋಟ ಸ್ಪರ್ಧೆಗಳು. ಚಿತ್ರಕಲಾಸ್ಪರ್ಧೆ. ಬಾಷಣಸ್ಪರ್ದೆ. ರಸಪ್ರಶ್ನೆಗಳನ್ನು ಏರ್ಪಡಿಸಿದ್ದರು.**

ವಿಜೇತರಾದ ಮಕ್ಕಳಿಗೆ ಬಹುಮಾನವನ್ನು ನೋಟಬುಕ್. ಪೇನ್ನು. ಬಾಗ್ಯ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ರೆಡ್ಡೆಪ್ಪ ಭೊವಿಗ್ರಾಮಪಂಚಾಯತ್ ಸದಸ್ಯರು ಮಾತನಾಡಿ ಯುವ ಟೀಮನವರು ಶಾಲಾಮಕ್ಕಳಿಗೆ ವಿವಿಧ ಸ್ಪರ್ಧೆಗಳನ್ನು



ಏರ್ಪಡಿಸಿ ಮಕ್ಕಳಿಗೆ ಸ್ಪೂರ್ತಿ ತುಂಬಿದ್ದಾರೆ. ಅಲ್ಲದೇ ಮಕ್ಕಳ ಶೈಕ್ಷಣಿಕವಾಗಿ ಮುಂದೆ ಬರಲು ಸಹಕಾರಿಯಾಗಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷರಾದ ಸಿದ್ದನಗೌಡ ಮುಖ್ಯಗುರು ವಹಿಸಿದ್ದರು. ಸಂದರ್ಭದಲ್ಲಿ ಮುಸ್ಟೂರು ಗ್ರಾಮಪಂಚಾಯತ್ ಮಾಜಿ ಗ್ರಾಮಪಂಚಾಯತ್ ಅಧ್ಯಕ್ಷರಾದ ತೇಜರಾಜನಾಯಕ .ಎಸ್ ಡಿ ಎಂ ಸಿ ಅಧ್ಯಕ್ಷರಾದ ಚನ್ನಪ್ಪ ದೊರೆ. ಎಸ್ ಡಿ ಎಂ ಸಿ ಸರ್ವಸದಸ್ಯರು.ಯುವಟೀಮಬಳಗದವರು ಗ್ರಾಮದ ಯುವಕರು ಮತ್ತು ಶಿಕ್ಷಕರು ಗ್ರಾಮಸ್ಥರು ಭಾಗವಹಿಸಿದ್ದರು.

# ನಿವೇಶನ ಮಂಜೂರಾತಿಗೆ ಒತ್ತಾಯಿಸಿ ಮಾಜಿ ಸೈನಿಕರಿಂದ ಮನವಿ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಮಾಜಿ ಸೈನಿಕರಿಗೆ ಪಟ್ಟಣದಲ್ಲಿ ನಿವೇಶನ ಅಥವಾ ವಸತಿಯನ್ನು ಮಂಜೂರು ಮಾಡುವಂತೆ ಒತ್ತಾಯಿಸಿ ತಾಳಿಕೋಟಿ ತಾಲೂಕ ಮಾಜಿ ಸೈನಿಕರ ಕ್ಷೇಮಾಭಿವೃದ್ಧಿ ಸಂಘ(ರಿ) ದ ಪದಾಧಿಕಾರಿಗಳು ತಹಸಿಲ್ದಾರ್ ಡಾ.ವಿನಯಾ ಹೂಗಾರ ಇವರಿಗೆ ಮಂಗಳವಾರ ಮನವಿ ಸಲ್ಲಿಸಿದರು.**

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಶ್ರೀಪಾಲ ಸಂಗಮಿ ಮಾತನಾಡಿ ನಮ್ಮ ಕ್ಷೇಮಾಭಿವೃದ್ಧಿ ಸಂಘದಲ್ಲಿ 43 ಮಾಜಿ ಸೈನಿಕರು ಹಾಗೂ 6 ವೀರ ನಾರಿಯರು ಒಟ್ಟು 49 ಸದಸ್ಯರಿದ್ದು ಇಲ್ಲಿಯವರೆಗೆ ನಮಗೆ ಸರ್ಕಾರದಿಂದ ಯಾವುದೇ ನಿವೇಶನ ಅಥವಾ ವಸತಿಯಾಗಲಿ ಮಂಜೂರು ಆಗಿರುವುದಿಲ್ಲ




ಆದ ಕಾರಣ ಈ ನಮ್ಮ ಮನವಿಯನ್ನು ಮನ್ನಿಸಿ ಆದಷ್ಟು ಬೇಗ ಮಂಜೂರು ಮಾಡಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು. ಮನವಿ ಪತ್ರವನ್ನು ಸ್ವೀಕರಿಸಿ ಮಾತನಾಡಿದ ತಹಸಿಲ್ದಾರ್ ಡಾ.ವಿನಯಾ ಹೂಗಾರ ಅವರು ಸದರಿ ಮನವಿಯನ್ನು ಪರಿಶೀಲಿಸಿ ಕ್ರಮ ವಹಿಸುತ್ತೇನೆ ಎಂದರು. ಈ ಸಮಯದಲ್ಲಿ ಸಂಘದ ಉಪಾಧ್ಯಕ್ಷ ಶಿವಪ್ಪ ಎಸ್ ಅಂಗಡಿ,ಕಾರ್ಯದರ್ಶಿ ಬಾಪುಗೌಡ ಪಾಟೀಲ, ಸದಸ್ಯರಾದ ಶಂಕರಗೌಡ ನರಸಲ?

# ಫೆ.1ರಂದು ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ಹಂಡೇ ವಜೀರ ಸಮಾಜದ ರಾಜ್ಯ, ಜಿಲ್ಲಾ, ತಾಲ್ಲೂಕು, ಮಹಿಳಾ ಮತ್ತು ಯುವ ಘಟಕದ ಪದಾಧಿಕಾರಿಗಳ ಸಹಯೋಗದಲ್ಲಿ ಅಖಿಲ ಕರ್ನಾಟಕ ವೀರಶೈವ ಲಿಂಗಾಯತ ಹಂಡೇವಜೀರ ಸಮಾಜದ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವು ಇದೇ ಫೆ1 ರಂದು ಸ್ಥಳೀಯ ಖಾಸ್ಗತೇಶ್ವರ ಸಭಾಭವನದಲ್ಲಿ ಬೆಳಿಗ್ಗೆ 11.00ಗಂಟೆಗೆ ನೆರವೇರಲಿದೆ ಎಂದು ಹಂಡೇವಜೀರ ಸಮಾಜದ ರಾಜ್ಯಾಧ್ಯಕ್ಷ ಡಾ.ಎಸ್.ಎಸ್.ಪಾಟೀಲ ತಿಳಿಸಿದರು.**

ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸೋಮವಾರ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿಯನ್ನು ಹಂಚಿಕೊಂಡು ಮಾತನಾಡಿ ಸಮಾರಂಭದಲ್ಲಿ 2024-2 5ನೆಯ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಪಿಯುಸಿ ಪರೀಕ್ಷೆಯಲ್ಲಿ




ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಗೌರವಿಸಲಾಗುವುದು. ಕಳೆದ 10 ವರ್ಷಗಳಿಂದ ವಿವಿದ ತಾಲ್ಲೂಕುಗಳಲ್ಲಿ ಸಮಾಜದ ಜಾಗೃತಿ ಮತ್ತು ಮಹಾಸಬಾಗಳನ್ನು ಮಾಡುತ್ತ ಬಂದಿದ್ದೇವೆ. ತಾಳಿಕೋಟೆ ಹೊಸ ತಾಲ್ಲೂಕು ರಚನೆಯಾದ ಹಿನ್ನೆಲೆಯಲ್ಲಿ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರವನ್ನು ಆಯೋಜಿಸಲಾಗಿದೆ.

ಸಮಾರಂಭದಲ್ಲಿ ಸಾನ್ನಿದ್ಯವನ್ನು ಹಿರೂರು ಅನ್ನದಾನೇಶ್ವರ ಸಂಸ್ಥಾನಮಠದ ಪಟ್ಟಾಧಿಕಾರಿ ಜಯಗುರುಸಿದ್ದೇಶ್ವರ ಸ್ವಾಮೀಜಿ, ತಾಳಿಕೋಟೆಯ ಖಾಸ್ಗತೇಶ್ವರಮಠದ ಪೀಠಾಧಿಪತಿ ಸಿದ್ಧಲಿಂಗದೇವರು, ಕರಭಂಟನಾಳ ಹಿರೇಮಠದ ಶಿವಕುಮಾರಸ್ವಾಮೀಜಿ, ವಹಿಸುವರು. ಅದ್ಯಕ್ಷತೆಯನ್ನು ತಾಳಿಕೋಟೆ ತಾಲ್ಲೂಕು ಘಟಕದ ಅಧ್ಯಕ್ಷ ರಾಮನಗೌಡ ಬಿರಾದಾರ ವಹಿಸುವರು.

ಉದ್ಘಾಟಕರಾಗಿ ಶಾಸಕ ಸಿ.ಎಸ್.ನಾಗಡೌಡ ಅಪ್ಪಾಜಿ, ದೇವರಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ, ಮಾಜಿ ಶಾಸಕರುಗಳಾದ ಎ.ಎಸ್.ಪಾಟೀಲ ನಡಹಳ್ಳಿ, ಸೋಮನಗೌಡ ಪಾಟೀಲ ಸಾಸನೂರ, ಪ್ರಮುಖರಾದ ಆರ್. ಎಸ್.ಪಾಟೀಲ ಕೂಚಬಾಳ, ಪ್ರಭು ದೇಸಾಯಿ ಹಾಗೂ ಅತಿಥಿಗಳಾಗಿ ಸಮಾಜದ ರಾಜ್ಯಾಧ್ಯಕ್ಷ, ಉಪಾಧ್ಯಕ್ಷ, ಪ್ರಧಾನ ಕಾರ್ಯದರ್ಶಿ ಸೇರಿದಂತೆ ವಿವಿದ ತಾಲ್ಲೂಕುಗಳ ಅಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿರುವರು ಎಂದು ಅವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಉಪಾದ್ಯಕ್ಷ ಎಸ್.ಜಿ.ಪಾಟೀಲ, ರಾಜ್ಯ ಪ್ರಧಾನ ಕಾರ್ಯದರ್ಶಿ ಆರ್.ಎಸ್.ಪಾಟೀಲ, ಜಿಲ್ಲಾ ಘಟಕದ ಅಧ್ಯಕ್ಷ ಸಂಗನಗೌಡ ಕರಬಂಟನಾಳ,

ಮುದ್ದೇಬಿಹಾಳ ತಾಲೂಕು ಅಧ್ಯಕ್ಷ ಎಂ.ಬಿ.ಬಿರಾದಾರ ವಕೀಲರು, ಸ್ಥಳೀಯ ತಾಲ್ಲೂಕು ಘಟಕದ ಅಧ್ಯಕ್ಷ ರಾಮನಗೌಡ ಬಿರಾದಾರ, ಬ.ಬಾಗೇವಾಡಿ ತಾಲೂಕ ಅಧ್ಯಕ್ಷ ಸಿದ್ದನಗೌಡ ಪಾಟೀಲ, ಮುತ್ತು ಬಿರಾದಾರ(ಚಬನೂರ), ನಿಂಗನಗೌಡ ಚೌದರಿ(ತುಂಬಗಿ), ಅಪ್ಪನಗೌಡ ಗೋನಾಳ, ಬಸನಗೌಡ ನಾರಾ ಪಾಟೀಲ, ದೇವೇಂದ್ರ ಗೋನಾಳ, ಎಸ್ ಬಿ ಸಾಸನೂರ, ಶಾಂತಗೌಡ ಪಾಟೀಲ, ವೀರೇಶ ಹಂಡರರ್ಗಲ್, ಸಂಗಮೇಶ ಪಾಟೀಲ, ಡಿ ಬಿ ಪಾಟೀಲ, ಪ್ರಕಾಶ ಬಿರಾದಾರ, ಅರವಿಂದ್ ಬಿರಾದಾರ, ಮಲ್ಲಿಕಾರ್ಜುನ ಚೌದ್ರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಏಕೆ.? ಏಕೆ.? ಏಕೆ.?

ಒಲವಿಲ್ಲದ ಮೇಲೆ ನಿತ್ಯ ಒಡನಾಟವೇಕೆ.?
ನಲಿವಿಲ್ಲದ ಮೇಲೆ ಜೊತೆ ನಿಲುವುದೇಕೆ.?
ಗೆಲುವಿಲ್ಲದ ಮೇಲೆ ಗುದ್ದಾಡುವುದೇಕೆ.?
ನಿಲುವಿಲ್ಲದ ಮೇಲೆ ಒದ್ದಾಡುವುದೇಕೆ.?

ಬಯಕೆಯಿಲ್ಲದ ಮೇಲೆ ಬಡಿದಾಟವೇಕೆ.?
ಬೇಕಿಲ್ಲದ ಮೇಲೆ ಬಿಕ್ಕಿ ಬೋರಿಡುವುದೇಕೆ.?
ತಿದ್ದದ ಮೇಲೆ ತಪ್ಪು ಹುಡುಕುವುದೇಕೆ.?
ಉಪಕರಿಸದ ಮೇಲೆ ಬಿಟ್ಟಿ ಉಪದೇಶವೇಕೆ.?

ಮನಸಿಲ್ಲದ ಮೇಲೆ ಒಣ ಮಾತುಗಳೇಕೆ.?
ಭಾವವಿಲ್ಲದ ಮೇಲೆ ಬಡಬಡಿಸುವುದೇಕೆ.?
ಚಿತ್ತವಿಲ್ಲದ ಮೇಲೆ ಚಡಪಡಿಸುವುದೇಕೆ.?
ನೆಮ್ಮದಿಯಿಲ್ಲದ ಮೇಲೆ ನಗುನಗುವುದೇಕೆ.?

ಕನಸುಗಳಿಲ್ಲದ ಮೇಲೆ ಕನವರಿಸುವುದೇಕೆ.?
ಕಾಮನೆಗಳಿಲ್ಲದ ಮೇಲೆ ಕೂಡಿರುವುದೇಕೆ.?
ಕಕ್ಕುಲತೆಯಿಲ್ಲದ ಮೇಲೆ ಕಾಯುವುದೇಕೆ.?
ಕರುಣೆಯಿಲ್ಲದ ಮೇಲೆ ಕಣ್ಣೀರಿಡುವುದೇಕೆ.?

ಬಂಧಗಳಿಲ್ಲದ ಮೇಲೆ ಬಂಧನಗಳೇಕೆ.?
ಭರವಸೆಯಿಲ್ಲದ ಮೇಲೆ ಬದುಕುವುದೇಕೆ.?
ನಂಬಿಕೆಯಿಲ್ಲದ ಮೇಲೆ ಜೊತೆ ನಡೆವುದೇಕೆ.?
ಆಸಕ್ತಿಯಿಲ್ಲದ ಮೇಲೆ ಅನುಕಂಪವೇಕೆ.?

ಆಗುವುದಿಲ್ಲವೆಂದ ಮೇಲೆ ಆಶ್ವಾಸನೆಗಳೇಕೆ.?
ಬೆಳೆಸುವುದಿಲ್ಲವೆಂದ ಮೇಲೆ ಬಿತ್ತುವುದೇಕೆ.?
ಕರಗುವುದಿಲ್ಲವೆಂದ ಮೇಲೆ ಕೊರಗುವುದೇಕೆ.?
ಮಮಕಾರವಿಲ್ಲದ ಮೇಲೆ ಮರುಗುವುದೇಕೆ.?

ಹರಸುವುದಿಲ್ಲವೆಂದ ಮೇಲೆ ಹರಕೆಯೇಕೆ.?
ಒಲಿಯುವುದಿಲ್ಲವೆಂದ ಮೇಲೆ ಓಲೈಕೆಯೇಕೆ.?
ನೆನೆವುದಿಲ್ಲವೆಂದ ಮೇಲೆ ಸದಾ ಸ್ಮರಣೆಯೇಕೆ.?
ಮರೆತಿದ್ದಾರೆಂದ ಮೇಲೆ ನೋವುನರಳಿಕೆಯೇಕೆ.?

ಪ್ರೀತಿಯಿಲ್ಲವೆಂದ ಮೇಲೆ ಪರೀಕ್ಷಿಸುವುದೇಕೆ.?
ನೀತಿಯಿಲ್ಲವೆಂದ ಮೇಲೆ ನಿರೀಕ್ಷಿಸುವುದೇಕೆ.?
ಶಾಂತಿಯಿಲ್ಲವೆಂದ ಮೇಲೆ ಶರಣಾಗುವುದೇಕೆ.?
ಸಂತೃಪ್ತಿಯಿಲ್ಲವೆಂದ ಮೇಲೆ ಸಹಬಾಳುವುದೇಕೆ.?

ಎ.ಎನ್.ರಮೇಶ್.ಗುಬ್ಬಿ.

## ಹೋಲಿ ಫ್ಯಾಮಿಲಿ ಚರ್ಚಿನ ವಾರ್ಷಿಕೋತ್ಸವ ಭಜನೆ ಪ್ರಾರ್ಥನೆಯೊಂದಿಗೆ ನಗರದಲ್ಲಿ ಭವ್ಯ ಮೆರವಣಿಗೆ

ನೈಜ್ಯ ದೆಸೆ ನ್ಯೂಸ್

ಪವಿತ್ರ ಕುಟುಂಬವಾದ ಹೋಲಿ ಫ್ಯಾಮಿಲಿ ಚರ್ಚ್ ನ ಪವಿತ್ರ ದೇವಾಲಯದ ವಾರ್ಷಿಕೋತ್ಸವದ ಹಬ್ಬ ಈ ಹಬ್ಬದ ಪ್ರಯುಕ್ತ ನಗರದ ಪ್ರಮುಖ ಬೀದಿಗಳಲ್ಲಿ ಪವಿತ್ರ ಕುಟುಂಬದ ಕ್ರಿಸ್ತ ಯೇಸು, ಸಂತ ಜೋಸೆಫ್, ಹಾಗೂ ಮಾತೆ ಮರಿಯಾ ತೇರ, ಅವರ ಪ್ರತಿಮೆ ಗಳೊಂದಿಗೆ ಭವ್ಯ ಮೆರವಣಿಗೆ ಆಯೋಜಿಸಲಾಗಿ-ತ್ತು. ಭಕ್ತರು ಭಜನೆ ಪ್ರಾರ್ಥನೆಗಳೊಂದಿಗೆ ಪಾಲ್ಗೊಂಡಿದ್ದರು.



ಈ ಮೆರವಣಿಗೆ ನಂತರ ಹಬ್ಬದ ವಿಶೇಷ ದಿವ್ಯ ಬಲಿ ಪೂಜೆಯನ್ನು ಅರ್ಪಿಸಲಾಯಿತು. ಈ ಪೂಜೆಗೆ ಸಿಂಧನೂರು ವಲಯದ ಶ್ರೇಷ್ಠ ಗುರುಗಳಾದ ಫಾದರ್ ಜ್ಞಾನಪ್ರಕಾಶ್ ಅವರು ನೇತೃತ್ವ ವಹಿಸಿದ್ದರು. ಇದೇ ವೇಳೆ ಸಿಂಧನೂರು ಮತ್ತು ಬಳ್ಳಾರಿ ಧರ್ಮಪ್ರಾಂತ್ಯದ ಅನೇಕ ಗುರುಗಳು ಪೂಜೆಯಲ್ಲಿ ಭಾಗವಹಿಸಿದ್ದರು. ಪೂಜೆಯ ನಂತರ ಭಕ್ತರಿಗೆ ಮಹಾಪ್ರಸಾದವನ್ನು ವಿತ-ರಿಸಲಾಯಿತು. ಈ ಹಬ್ಬದ ಆಚರಣೆಯಿಂದ ಸಮುದಾಯದಲ್ಲಿ

# ನರೇಗಾ ಮರುಸ್ಥಾಪನೆಗೆ ಜನಸೇವಾ ಫೌಂಡೇಶನ್ ಮನವಿ–ವಿಬಿ ಗ್ರಾಮ ಜಿ ಕಾಯ್ದೆ ರದ್ದುಪಡಿಸಲು ಒತ್ತಾಯ

ನೈಜ್ಯ ದೆಸೆ ನ್ಯೂಸ್

**ಮದ್ಲಾಪೂರು: ಗ್ರಾಮ ಪಂಚಾಯತ್ ಮದ್ಲಾಪೂರು ವ್ಯಾಪ್ತಿಯಲ್ಲಿ ವಿಕಸಿತ ಭಾರತ್ ಗ್ಯಾರಂಟಿ ರೋಜಗಾರ್ ಮತ್ತು ಆಜೀವಿಕ ಮಿಷನ್ ಯೋಜನೆ ಕುರಿತು ನಡೆದ ಸಭೆಯ ಸಂದರ್ಭದಲ್ಲಿ, ಜನಸೇವಾ ಫೌಂಡೇಶನ್ (ರಿ) ಸಂಘಟನೆಯ ತಾಲೂಕು ಅಧ್ಯಕ್ಷ ತಾಜುದ್ದೀನ್ ಚೀಕಲಪರ್ವಿ ಮಾತನಾಡಿ, ಕಾರ್ಮಿಕ ವಿರೋಧಿ ವಿಬಿ ಗ್ರಾಮ ಜಿ ಹೊಸ ಕಾಯ್ದೆಯನ್ನು ರದ್ದುಪಡಿಸಿ, ಮೊದಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (MGNREGA) ಯನ್ನು ಮರುಸ್ಥಾಪಿಸಬೇಕೆಂದು ಆಗ್ರಹಿಸಿದರು.**

ನರೇಗಾ ಯೋಜನೆ ಬಡ ಕೂಲಿ ಕಾರ್ಮಿಕರ ಬದುಕಿನ ಆಧಾರವಾಗಿದ್ದು, ಇದನ್ನು ದುರ್ಬಲಗೊಳಿಸುವ ಯಾವುದೇ ಕ್ರಮಗಳನ್ನು ಸಂಘಟನೆ ತೀವ್ರವಾಗಿ ವಿರೋಧಿಸುತ್ತದೆ ಎಂದು ಅವರು ಹೇಳಿದರು. ದಿನಾಂಕ 26-01-2026 ರಂದು



ಆಯೋಜಿಸಿರುವ ವಿಶೇಷ ಗ್ರಾಮಸಭೆಯಲ್ಲಿ ಈ ವಿಷಯವನ್ನು ಚರ್ಚಿಸಿ, ಸರ್ವಾನುಮತದಿಂದ ನರೇಗಾ ಮರುಸ್ಥಾಪನೆಗೆ ತೀರ್ಮಾನ ಕೈಗೊಳ್ಳಬೇಕೆಂದು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸಂಘಟನೆಯ ವತಿಯಿಂದ ಮನವಿ ಸಲ್ಲಿಸಲಾಯಿತು. ನರೇಗಾ ಯೋಜನೆಯ ಮೂಲಕ ಕಾರ್ಮಿಕರು ವಲಸೆ ಹೋಗದೇ ತಮ್ಮದೇ ಗ್ರಾಮದಲ್ಲಿ ಜೀವನೋಪಾಯ ಸಾಗಿಸುತ್ತಿದ್ದು, ಇದನ್ನು ಕೇವಲ ಉದ್ಯೋಗವಲ್ಲ, ಕಾರ್ಮಿಕರ ಹಕ್ಕು ಎಂದು ಪರಿಗಣಿಸಬೇಕು ಎಂದು ಸಂಘಟನೆಯು ಮನವಿಯಲ್ಲಿ ತಿಳಿಸಿದೆ.

ಮನವಿಯಲ್ಲಿ ಸಂಘಟನೆ ಈ ಕೆಳಗಿನ ಬೇಡಿಕೆಗಳನ್ನು ಮುಂದಿಟ್ಟಿದೆ: ನರೇಗಾ ಯೋಜನೆಯಲ್ಲಿ ಬಾಲಕಾರ್ಮಿಕರ ಬಳಕೆಗೆ ಸಂಪೂರ್ಣ ನಿಷೇಧ, ದಿನಕ್ಕೆ ಕನಿಷ್ಠ ಒಂದು ಬಾರಿ ಎಂಎಂಎಸ್ ಮೂಲಕ ಕೂಲಿ ಪಾವತಿ, ಕೆಲಸಕ್ಕೆ ಬೇಕಾದ ಉಪಕರಣಗಳ ವೆಚ್ಚವನ್ನು ಸರ್ಕಾರವೇ ಭರಿಸುವುದು, ಕಾರ್ಮಿಕರಿಗೆ ಕುಡಿಯುವ ನೀರು ಮತ್ತು ನೆರಳಿನ ವ್ಯವಸ್ಥೆ ಒದಗಿಸುವುದು, ಸಮಯಕ್ಕೆ ಸರಿಯಾಗಿ ಕೂಲಿ ಪಾವತಿ ಹಾಗೂ ವಿಳಂಬವಾದಲ್ಲಿ ಪರಿಹಾರ ನೀಡುವುದು ಸೇ-ರಿದಂತೆ ಹಲವು ಬೇಡಿಕೆಗಳನ್ನು ಒಳಗೊಂಡಿದೆ.

ಈ ಸಂದರ್ಭದಲ್ಲಿ ಜನಸೇವಾ ಫೌಂಡೇಶನ್ ಉಪಾಧ್ಯಕ್ಷ ಹಸನ್ ಚೀಕಲಪರ್ವಿ, ಸಂಯುಕ್ತ ಕಾರ್ಯದರ್ಶಿ ಸಿದ್ದರೆಡ್ಡಿ ಜಾನೇಕಲ್, ಪ್ರಧಾನ ಕಾರ್ಯದರ್ಶಿ ವಾಸುದೇವ, ಹುಸೇನ್ ಬಾಷಾ ಚೀಕಲಪರ್ವಿ, ಆಜೀತ್ ಚೀಕಲಪರ್ವಿ, ಗೋಕುಲ್, ರಾಜಾಸಾಬ್ ಸೇರಿದಂತೆ ಸಂಘಟನೆಯ ಪದಾಧಿಕಾ-ರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಶಳ್ಳಗಿ ಗ್ರಾಮದ ನಾಡಗೌಡ ದಂಪತಿಗಳಿಗೆ ಗೌರವ ಸಮರ್ಪಣೆ




ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಶಳ್ಳಗಿ ಗ್ರಾಮದ ಸಮಾಜ ಸೇವಕರಾದ ಸುರೇಶಗೌಡ ಕಲ್ಯಾಣದಪ್ಪಗೌಡ ನಾಡಗೌಡ ಹಾಗೂ ಅವರ ಧರ್ಮಪತ್ನಿ ಸುಮಿತ್ರಾಗೌಡಶಾನಿ ಸುರೇಶಗೌಡ ನಾಡಗೌಡ ಅವರನ್ನು ಗ್ರಾಮದ ಸರ್ಕಾರಿ ಶಾಲೆಯಲ್ಲಿ ಹಮ್ಮಿಕೊಂಡ 77ನೇ ಗಣರಾಜ್ಯೋತ್ಸವ ಕಾರ್ಯಕ್ರಮದ ವೇದಿಕೆಯಲ್ಲಿ ಶಾಲೆಯ ವತಿಯಿಂದ ಸನ್ಮಾನಿಸಿ ಗೌರವ ಸಮರ್ಪಣೆ ಸಲ್ಲಿಸಲಾಯಿತು.**

ಗ್ರಾಮದಲ್ಲಿ ನಡೆಯುವ ಸಾಮಾಜಿ-ಕ, ಶೈಕ್ಷಣಿಕ ಹಾಗೂ ಧಾರ್ಮಿಕ ಸೇವಾ ಕಾರ್ಯಗಳಿಗೆ ಸದಾ ಆರ್ಥಿಕ ಸಹಾಯ ನೀಡುವ ಇವರು ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ರೂ 1,30,000 ವೆಚ್ಚದಲ್ಲಿ ಸುಸಜ್ಜಿತವಾದ ವೇದಿಕೆಯನ್ನು ನಿರ್ಮಾಣ ಮಾಡಿಕೊಟ್ಟಿದ್ದಾರೆ. ಈ ಸಂದರ್ಭದಲ್ಲಿ ಮುಖ್ಯ ಗುರುಗಳಾದ ಬಿ.ಸಿ.ಗೋಗಿ, ಗ್ರಾಮದ ಪ್ರಮುಖರಾದ ಕಾಶಿರಾಯಗೌಡ ದೇಸಾಯಿ,

ಪ್ರಭುಗೌಡ ಚಿಂಚೋಳ್ಳಿ, ಗ್ರಾ.ಪಂ ಸದಸ್ಯ ಜೈಪಾಲ ರೆಡ್ಡಿ ಬಂಟನೂರ, ಬಸವಂತರಾಯ ಚೌದ್ರಿ,ನಿಂಗಣ್ಣ ಹೊಸಮನಿ, ಬಂಡೆಪ್ಪ ಕೋರಿ, ಬಸವರಾಜ ನಾಯ್ಕಲ್, ಆದ-'ಣ್ಣ ಸಜ್ಜನ,ಹಾರೂನ ಖಾಜಿ, ಶಿಕ್ಷಕರಾದ ಕೆ.ಕೆ. ಅಸ್ಕಿ, ಆರ್.ಎಂ.ಚೌದರಿ, ಸಿ.ಬಿ.ಗುಡ್ಡದ, ಬಿ.ವೈ ಜಟ್ಟಗಿ, ಕಿರಣಕುಮಾರ ಎನ್ಕೆ, ಅಂಗನವಾಡಿ ಕಾರ್ಯಕರ್ತೆ ಗುರುಬಸಮ್ಮ ಆರ್.ಚೌಧರಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕೊರ್ವಿಹಾಳ ಗ್ರಾಮದ ನಿವಾಸಿ ಸ್ವಾಮಿ ಕಾಣೆ: ಪತ್ತೆಗೆ ಮನವಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯ ಕೊರ್ವಿಹಾಳ ಗ್ರಾಮದ ನಿವಾಸಿ ಸ್ವಾಮಿ ತಂದೆ ರಾಮಪ್ಪ (38) ಎಂಬ ಕಾಣೆಯಾದ ಬಗ್ಗೆ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 230/2025 ಕಲಂ ಮನುಷ್ಯ ಕಾಣೆರಡಿ ಪ್ರಕರಣ ದಾಖಲಾಗಿದೆ.**

ಈತನು ದಿನಾಂಕ: 05-12-2025ರ ರಾತ್ರಿ 8 ಗಂಟೆ ಸುಮಾ-ರಿಗೆ ಗುಂಜಳ್ಳಿಯಲ್ಲಿ ಉರುಸು ಕಾರ್ಯಕ್ರಮ ಮುಗಿಸಿಕೊಂಡು ಕೊರ್ವಿಹಾಳ ಗ್ರಾಮದ ತಮ್ಮ ಮನೆಗೆ ಹೋಗಿ, ಮನೆಯಲ್ಲಿ ತನ್ನ ತಾಯಿಗೆ ಹೊರಗಡೆ ಹೋಗಿ ಬರುತ್ತೇನೆಂದು ಹೇಳಿ ಹೋದವನು ಮರಳಿ ಮನೆಗೆ ಬಾರದೇ ಕಾಣೆಯಾಗಿದ್ದಾನೆ.



ಚಹರೆ: ವಯಸ್ಸು 38 ವರ್ಷ, ಉದ್ಯೋಗ ಟ್ರ?ಯಾಕ್ಟರ್ ಚಾಲಕ. ಸಾಧಾರಣ ಮೈಕಟ್ಟು, ಗೋಧಿ ಮೈ ಬಣ್ಣ, ಚಪ್ಪಟೆ ಮುಖ, ಕಪ್ಪು ಕೂದಲು, ನೀಲಿ ಬಣ್ಣದ ಅಂಗಿ, ನೀಲಿ ಬಣ್ಣದ ಪ್ಯಾಂಟ್ ಬಟ್ಟೆಯನ್ನು ಧರಿಸಿರುತ್ತಾನೆ.

ಕನ್ನಡ, ತೆಲುಗು ಹಾಗೂ ಹಿಂದಿ ಭಾಷೆ ಮಾತಾಡುತ್ತಾನೆ. ಈ ಕಾಣೆಯಾದ ಯುವಕನ ಬಗ್ಗೆ ಮಾಹಿತಿ ಸಿಕ್ಕಲ್ಲಿ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ಪಿಎಸ್ಐ 9480803850, ಸಿಪಿಐ ಗ್ರಾಮೀಣ ವೃತ್ತ ರಾಯಚೂರು: 9480803832, ಡಿವೈಎಸ್ಪಿ ರಾಯಚೂರು 9480803820, ರಾಯಚೂರು ಕಂಟ್ರೋಲ್ ರೂಮ್ ದೂರವಾಣಿ ಸಂಖ್ಯೆ: 08532-235635ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವಕರು ಕ್ರೀಡಾ ಮನೋಭಾವ ಬೆಳೆಸಿಕೊಂಡು ಸಮಾಜದ ಆಸ್ತಿಯಾಗಿ: ವೀರೇಶ ಉಪ್ಪಲದೊಡ್ಡಿ

ನೈಜ್ಯ ದೆಸೆ ನ್ಯೂಸ್

**ಕ್ರೀಡೆಯಲ್ಲಿ ಗ್ರಾಮೀಣ ಪ್ರತಿಭೆಗಳು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿಗುರುತಿಸಿಕೊಂಡು ಜಿಲ್ಲೆ,ತಾಲೂಕು, ತಮ್ಮ ಊರಿನ ಹೆಸರನ್ನು ಉಳಿಸುವಂತಾಗಬೇಕು ಯುವಕರು ಕ್ರೀಡಾ ಚಟುವಟಿಕೆಗಳಲ್ಲಿ ಅತಿ ಹೆಚ್ಚು ತೊಡಗಿಕೊಳ್ಳುವುದರಿಂದ ಜೀವನದಲ್ಲಿ ಶಿಸ್ತು ಮತ್ತು ಗುರಿ ತಲುಪುವ ಛಲ ಮೂಡುತ್ತದೆಂದು ವಿರುಪಾಪುರ ಜಿಲ್ಲಾ ಪಂಚಾಯತಿ ಮೀಸಲು ಕ್ಷೇತ್ರದ ಆಕಾಂಕ್ಷಿಯಾದ ವೀರೇಶ ಎನ್.ಉಪ್ಪಲದೊಡ್ಡಿ ಕರೆ ನೀಡಿದರು.**

ಸಿಂಧನೂರು ತಾಲೂಕಿನ ಮಸ್ಕಿ ವಿಧಾನ ಸಭಾ ಕ್ಷೇತ್ರದ ಅರಳಹಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಬಡ್ಡಿ ಪಂದ್ಯಾವಳಿಯಲ್ಲಿ ಸ್ಪರ್ಧಾರ್ಥಿಗಳಾಗಿ ಭಾಗವಹಿಸಿದ್ದ ಎಲ್ಲಾ ಕ್ರೀಡಾ ಪಟುಗಳಿಗೆ ಉಚಿತವಾಗಿ ಟಿ-ಶರ್ಟ್ ವಿತರಿಸಿ, ಕಬಡ್ಡಿ ಪಂದ್ಯಕ್ಕೆ ಚಾಲನೆ ನೀಡಿ ಮಾತನಾಡಿದ



ಅವರು, ಈ ಭಾರತ ದೇಶ ಯುವಕರ ದೇಶ ಸಮಾಜದ ಕೊಂಡಿ ಇದ್ದಹಾಗೆ, ಪ್ರತಿಯೊಬ್ಬರಲ್ಲೂ ಕೂಡ ಕ್ರೀಡಾ ಮನೋಭಾವನೆ ಬರಬೇಕು. ಇಲ್ಲಿ ಸೋಲು-ಗೆಲುವು ಮುಖ್ಯವಲ್ಲ ಸ್ಪರ್ಧೆಯಲ್ಲಿ ಭಾಗವಹಿಸುವಿಕೆ ಬಹಳ ಮುಖ್ಯ, ಈ ದಿಶೆಯಲ್ಲಿ ಕ್ರೀಡಾ ಮನೋಭಾವ ಬೆಳಸಿಕೊಳ್ಳಿ, ಸಮಾಜಕ್ಕೆ ಮಾದರಿಯಾಗಿ ಕಲಿತ ಶಾಲೆಗೆ ಶಿಕ್ಷಕರಿಗೆ ಹೆಸರು ತನ್ನಿ,

ತಂದೆ-ತಾಯಿ ಆರ್ಶೀವಾದ ಪಡೆದುಕೊಳ್ಳಿ ಈ ಪ್ರಜಾಪ್ರಭುತ್ವದಲ್ಲಿ ಉತ್ತಮರಾಗಿ ಬಾಳಿ ಬದುಕಿ, ಹಿರಿಯರನ್ನ ಪೂಜಿಸಿ, ದುಡಿಯುವ ವರ್ಗಕ್ಕೆ, ರೈತರಿಗೆ, ಗೌರವಕೊಡಿ ಎಂದರು. ಈ ವೇಳೆ: ಕ್ರೀಡಾಪಟುಗಳು, ಗ್ರಾಮದ ಮುಖಂಡರು, ಮಹಿಳೆಯರು, ಪಾಲಕರು, ಆಗಮಿಸಿ ಕ್ರೀಡಾ ಪಟುಗಳಿಗೆ ಪ್ರೋತ್ಸಾಹಿಸಿದರು.

# ರಾಯಚೂರು ಉತ್ಸವದ ಸಿದ್ಧತಾ ಕಾರ್ಯ ಚುರುಕಾಗಲಿ: ನಿತೀಶ್ ಕೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಫೆ.5 ರಿಂದ ಮೂರು ದಿನಗಳ ಕಾಲ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವಕ್ಕೆ ಇನ್ನು ಕೆಲವೇ ದಿನಗಳು ಬಾಕಿ ಇದ್ದು ಅಧಿಕಾರಿಗಳು ಮತ್ತು ಸಿಬ್ಬಂದಿ ಚುರುಕಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.**

ಹಳೆಯ ಜಿಲ್ಲಾಧಿಕಾರಿಗಳ ಆವರಣದಲ್ಲಿನ ಮಹಾನಗರ ಪಾಲಿಕೆಯ ಕೋರ್ಟ ಹಾಲನಲ್ಲಿ ಜನವರಿ 27ರಂದು ನಡೆದ ರಾಯಚೂರು ಉತ್ಸವದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಎಲ್ಲ ಮಂದಿರಗಳು, ಮಸೀದಿಗಳು ಹಾಗೂ ಚರ್ಚ್ ಸೇರಿದಂತೆ ಇನ್ನೀತರ ಎಲ್ಲ ದೇವಸ್ಥಾನಗಳಲ್ಲಿ ಪ್ರಾರ್ಥನಾ ಸಮಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಜನತೆಗೆ ಉತ್ಸವದ ಬಗ್ಗೆ ಮಾಹಿತಿ ಕೊಡುವ ಕಾರ್ಯವಾಗಬೇಕು. ರಾಯಚೂರು, ಮಾನವಿ, ಸಿಂಧನೂರ, ಲಿಂಗಸೂರು, ದೇವದುರ್ಗ, ಮಸ್ಕಿ, ಸಿರವಾರ ಸೇರಿದಂತೆ ಜಿಲ್ಲೆಯ ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿನ ಕಸ ಎತ್ತುವ ವಾಹನಗಳಲ್ಲಿ ಕಡ್ಡಾಯವಾಗಿ ಜಿಂಗಲ್ ಮೂಲಕ ಉತ್ಸವದ ಪ್ರಚಾರ ಕಾರ್ಯ ನಡೆಸಬೇಕು.



ಮುಖ್ಯವಾಗಿ ತಾಲೂಕು ಪಂಚಾಯತನ ಎಲ್ಲ ಕಾರ್ಯ ನಿರ್ವಹಣಾಧಿಕಾರಿಗಳು ತಮ್ಮ ತಮ್ಮ ವ್ಯಾಪ್ತಿಯ ಎಲ್ಲ ಗ್ರಾಮ ಪಂಚಾಯತಗಳ ಪಿಡಿಓ ಅವರ ಸಭೆ ಕರೆದು ಅವರ ಮೂಲಕ ಗ್ರಾಮ ಮತ್ತು ಹೋಬಳಿ ಮಟ್ಟದಲ್ಲಿ ಸಹ ಕಸ ಎತ್ತುವ ವಾಹನಗಳು ಮತ್ತು ಡಂಗೂರದ ಮೂಲಕ ಉತ್ಸವದ ಬಗ್ಗೆ ತಿಳಿಸುವ ಕಾರ್ಯ ಮಾಡಬೇಕು. ಆಯಾ ಗ್ರಾಮಗಳಲ್ಲಿನ ಶಾಲೆಗಳ ಮುಖ್ಯ ಗುರುಗಳೊಂದಿಗೆ ಚರ್ಚಿಸಿ ಗ್ರಾಮ ಪಂಚಾಯಿತಿ ಮತ್ತು ಪ್ರಾಥ-'ಮಿಕ ಹಾಗೂ ಪ್ರೌಢಶಾಲೆಗಳ ಸಹಯೋಗದಲ್ಲಿ ಗ್ರಾಮಸ್ಥರ ಸಹಕಾರದೊಂದಿಗೆ ಗ್ರಾಮಗಳಲ್ಲಿ ಜಾಥಾ ನಡೆಸಿ ಫೆ.5 ಹಾಗೂ ಫೆ.6 ಮತ್ತು ಫೆ.7ರಂದು ರಾಯಚೂರು ಉತ್ಸವ ನಡೆಯಲಿದೆ. ಎಲ್ಲರೂ ಭಾಗಿಯಾಗಬೇಕು ಎನ್ನುವ ಸಂದೇಶ ನೀಡಲು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾ-ರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಂಟಿ ಸಭೆ ನಡೆಸಲು ಸೂಚನೆ: ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಪ್ರತಿ ಗ್ರಾಮಗಳಲ್ಲಿ ಪ್ರತಿ ಮನೆಮನೆ ತೆರಳಿ ರಾಯಚೂರು ಉತ್ಸವದ ಬಗ್ಗೆ ಜನತೆಗೆ ತಿಳಿಸುವ ಕಾರ್ಯ ಮಾಡಬೇಕು. ಈ ನಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಆರೋಗ್ಯ ಇಲಾಖೆಯ ಅಧಿಕಾರಿಗಳು ಸೇರಿ ತಮ್ಮ ಹಂತದಲ್ಲಿ ಜಂಟಿ ಸಭೆ ಅಥವಾ ವಿಡಿಯೋ ಕಾನ್ಫರೆನ್ಸ್ ನಡೆಸಿ ಉತ್ಸವದ ಪ್ರಚಾರ ಕಾರ್ಯದ ಜವಾಬ್ದಾರಿಯನ್ನು ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯ-ರಿಗೆ ವಹಿಸಿ ಮೇಲ್ವಿಚಾರಣೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಆಟೋ ಪ್ರಚಾರ ತುರ್ತು ಆರಂಭವಾಗಲಿ: ಜಿಲ್ಲೆಯಲ್ಲಿನ ಎಲ್ಲಾ ನಗರ, ಪಟ್ಟಣ ಪ್ರದೇಶ ಮತ್ತು ಹೋಬಳಿಗಳಲ್ಲಿ ಆಟೋ ಮೂಲಕ ಪ್ರಚಾರ ಕಾರ್ಯವು ಕೂಡಲೇ ಆರಂಭವಾಗಲಿ ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಬಸ್ಸುಗಳಿಗೆ ಪೋಸ್ಟರ್ ಅಂಟಿಸಿ: ಉತ್ಸವಕ್ಕೆ ಕೆಲವೇ ದಿನಗಳು ಬಾಕಿ ಇದೆ. ಹೀಗಾಗಿ ಪ್ರಚಾರ ಕಾರ್ಯ ಚುರುಕುಗೊಳಿಸಬೇಕು.

ನಗರದಲ್ಲಿ ಸಂಚರಿಸುವ ಹಾಗೂ ಬೇರೆಡೆ ಸಂಚರಿಸುವ ಎಲ್ಲ ಬಸ್ಸುಗಳಿಗೆ ಪೋಸ್ಟರ್ ಅಂಟಿಸಿ ಪ್ರಚಾರ ಕಾರ್ಯ ನಡೆಸಬೇಕು ಎಂದು ಸೂಚನೆ ನೀಡಿದರು. ವಿವಿಧೆಡೆ ಪ್ರಚಾರ ನಡೆಸಿ: ಪ್ರತಿ ನಿತ್ಯ ಸಾವಿರಾರು ಸಂಖ್ಯೆಯಲ್ಲಿ ಸಂಚರಿಸುವ ಪ್ರಯಾಣಿಕರಿಗೆ ಸಂದೇಶ ಹೋಗುವ ನಿಟ್ಟಿನಲ್ಲಿ ನಗರದ ರೈಲ್ವೆ ನಿಲ್ದಾಣ ಸೇರಿದಂತೆ ವಿವಿಧೆಡೆ ಬ್ಯಾನರ್ ಅಂಟಿಸಿ ಪ್ರಚಾರ ನಡೆಸಬೇಕು. ಫೆ.5 ರಿಂದ ಫೆ.7ರವರೆಗೆ ಯಾವ ಕಾರ್ಯಕ್ರಮಗಳು ಯಾವ ಸಮಯಕ್ಕೆ ನಡೆಯುತ್ತವೆ ಎಲ್ಲಿ ನಡೆಯುತ್ತವೆ ಎಂಬುದರ ಬಗ್ಗೆ ಪಟ್ಟಿ ಮಾಡಿ ಬ್ಯಾನರ್ ಅಳವಡಿಸಿ ಸಾರ್ವಜನಿಕ-ರಿಗೆ ಮಾಹಿತಿ ನೀಡಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಡಿಡಿಪಿಐ, ಡಿಡಿಪಿಯುಗೆ ಸೂಚನೆ: ಮುಖ್ಯವಾಗಿ ಎಲ್ಲ ಶಾಲೆಗಳ ಮತ್ತು ಕಾಲೇಜುಗಳ ವಿದ್ಯಾರ್ಥಿಗಳಿಗೆ ಉತ್ಸವದ ಬಗ್ಗೆ ವ್ಯಾಪಕವಾಗಿ ಪ್ರಚಾರ ಹೋಗುವ ದಿಶೆಯಲ್ಲಿ ಡಿಡಿಪಿಐ ಮತ್ತು ಡಿಡಿಪಿಐ ಇಲಾಖೆಗಳ ಅಧಿಕಾರಿಗಳು ಚುರುಕಾಗಿ ಕಾರ್ಯನಿರ್ವಹಿಸಬೇಕು.

ಈ ಬಗ್ಗೆ ಎಲ್ಲ ಶಾಲಾ ಕಾಲೇಜುಗಳಿಗೆ ಸುತ್ತೋಲೆ ಮೂಲಕ ಮಾಹಿತಿ ಕಳುಹಿಸಲು ಕೂಡಲೇ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ವೆಬ್‌ಸೈಟ್ ವೀಕ್ಷಣೆ: ರಾಯಚೂರು ಉತ್ಸವ ನಿಮಿತ್ತ ಸಿದ್ಧಪಡಿಸಿದ ವೆಬ್‌ಸೈಟ್, ಇನ್‌ಸ್ಟಾಗ್ರಾಂ, ಪೇಸ್‌ಬುಕ್, ಎನ್‌ಐಸಿ ಪೇಜ್ ಸೇರಿದಂತೆ ನಾನಾ ವೆಬ್‌ತಾಣಗಳನ್ನು ಜಿಲ್ಲಾಧಿಕಾರಿಗಳು ವೀಕ್ಷಣೆ ಮಾಡಿದರು. ಎಲ್ಲ ವೆಬ್‌ತಾಣಗಳು ಪ್ರತಿ ದಿನ ಅಪಡೇಟ್ ಆಗಬೇಕು. ಉತ್ಸವದ ಕಾರ್ಯಕ್ರಮಗಳ ಕುರಿತಂತೆ ಜನತೆಗೆ ಸ್ಪಷ್ಟ ಹಾಗು ನಿಖರವಾದ ಮಾಹಿತಿ ಒದಗಿಸಬೇಕು ಎಂದು ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ್ ಕಾಂದೂ, ಮಹಾನಗರ ಪಾಲಿಕೆಯು ಆಯುಕ್ತರಾದ ಜುಬಿನ್ ಮೋಹಪಾತ್ರ, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಈರಣ್ಣ ಬಿರಾದಾರ, ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ ಸೇರಿದಂತೆ ವಿವಿಧ ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳು ಇದ್ದರು.

## ನೇಮಕಾತಿ ಪ್ರಕಟಣೆ

ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (SBI) ನಲ್ಲಿ 12 ಸ್ಪೆಷಲಿಸ್ಟ್ ಕೇಡರ್ ಅಧಿಕಾರಿಗಳ ಹುದ್ದೆಗಳಿಗೆ ನೇಮಕಾತಿ 2026. ಬಿ.ಟೆಕ್/ಬಿ.ಇ, ಎಂ.ಎಸ್ಸಿ, ಎಂ.ಇ/ಎಂ.ಟೆಕ್, ಎಂಸಿಎ ಹೊಂದಿರುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್ ಅರ್ಜಿಯು 16-01-2026 ರಂದು ಪ್ರಾರಂಭವಾಗುತ್ತದೆ ಮತ್ತು 05-02-2026 ರಂದು ಮುಕ್ತಾಯಗೊಳ್ಳುತ್ತದೆ. ಅಭ್ಯರ್ಥಿಯು SBI ವೆಬ್‌ಸೈಟ್, ಋ. ಛಿಚಿಟಿಇ.ಚಿಟ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು.
ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ 16/01/2026
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 05/02/2026
ಅಧಿಕೃತ ವೆಬ್‌ಸೈಟ್ https://sbi.co.in/web/careers/current-openings

## ಸವಿತಾ ಮಹರ್ಷಿಗಳ ತತ್ತ್ವಾದರ್ಶಗಳನ್ನು ಅಳವಡಿಸಿಕೊಳ್ಳಲು ಸಾಹಿತಿ ವೀರ ಹನುಮಾನ್ ಸಲಹೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಸವಿತಾ ಮಹರ್ಷಿಗಳು ತಿಳಿಸಿದ ಮಹತ್ವದ ತತ್ತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸವಿತಾ ಸಮಾಜವನ್ನು ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ಮತ್ತು ಸಮಾಜವನ್ನು ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಮುಂದೆ ತರುವ ನಿಟ್ಟಿನಲ್ಲಿ ಪ್ರತಿಯೊಬ್ಬರು ಶ್ರಮಿಸಬೇಕು ಎಂದು ರಾಯಚೂರಿನ ಹಿರಿಯ ಸಾಹಿತಿ ವೀರ ಹನುಮಾನ್ ಅವರು ಹೇಳಿದರು.**

ಜನವರಿ 27ರ ಮಂಗಳವಾರ ದಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹಮ್ಮಿಕೊಂಡಿದ್ದ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.



ಸವಿತಾ ಮಹರ್ಷಿಗಳು ಸಾಧಕ ವ್ಯಕ್ತಿಯಾಗಿದ್ದು, ಸವಿತಾ ಸಮಾಜದ ಮೂಲ ಪುರುಷರಾಗಿದ್ದಾರೆ. ಲೋಕದ ಜ್ಞಾನವನ್ನು ಹೊಂದಿದ್ದ ಮತ್ತು ಸಮಾಜದ ಅಂಕುಡೊಂಕುಗಳನ್ನು ತಿದ್ದುವ ನಿಟ್ಟಿನಲ್ಲಿ ಉತ್ತಮ ಸಂದೇಶಗಳನ್ನು ನೀಡಿದ್ದಾರೆ. ಮನುಕುಲದ ಉದ್ದಾರಕ್ಕಾಗಿ ಜನ್ಮವೆತ್ತಿ, ಮಾನಕುಲಕ್ಕೆ ಸಮ ಸಮಾಜದ ಸಂದೇಶವನ್ನು ಸಾರಿ, ಮನುಷ್ಯನ ದೈಹಿಕ ಮತ್ತು ಮಾನಸಿಕ ವ್ಯಕ್ತಿತ್ವವನ್ನು ರೂಪಿಸುವ ನಿಟ್ಟಿನಲ್ಲಿ ಸಾಕಷ್ಟು ವಿಚಾರಗಳನ್ನು ನೀಡಿದ್ದಾರೆ. ಅಂತಹ ಮಹಾನ್ ಮಹರ್ಷಿಗಳ ವಿಚಾರಗಳನ್ನು ನಾವು ಅರಿಯಬೇಕು ಎಂದು ತಿಳಿಸಿದರು.

ಸವಿತಾ ಮಹರ್ಷಿ ಭಾವಚಿತ್ರ ಮೆರವಣಿಗೆ: ಕಾರ್ಯಕ್ರಮಕ್ಕೂ ಮೊದಲು ನಗರದ ಗೋವಿಂದರಾವ್ ಪೆಟ್ರೋಲ್ ಬಂಕ್ ಹತ್ತಿರ ನಡೆದ



ಸವಿತಾ ಮಹರ್ಷಿ ಭಾವಚಿತ್ರದ ಮೆರವಣಿಗೆಗೆ ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ ಅವರು ಚಾಲನೆ ನೀಡಿದರು. ಮೆರವಣಿಗೆಯು ವಿವಿಧ ಕಲಾ ತಂಡಗಳೊಂದಿಗೆ ಸಾಗಿ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರಕ್ಕೆ ಬಂದು ಸೇರಿತು. ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಪರಶುರಾಮ, ಮಹಾನಗರ ಪಾಲಿಕೆಯ ಕಂದಾಯ ಅಧಿಕಾರಿ ನರಸಿಂಹ ರೆಡ್ಡಿ, ಸಮಾಜದ ಮುಖಂಡರಾದ ಗೋವಿಂದ, ನಾಗರಾಜ್, ನರಸರೆಡ್ಡಿ, ವೆಂಕಟೇಶ, ರಾಘವೇಂದ್ರ ಇಟಗಿ, ನಾಗರಾಜ್, ಸುಮಾ ಅಶೋಕ ಗಸ್ತಿ, ಗಾಯತ್ರಿ, ಜಿ.ಆನಂದ, ಬಸವರಾಜ, ಸುಶೀಲಾ, ಭೀಮೇಶ್ ಸೇರಿದಂತೆ ಇತರರು ಇದ್ದರು.

## ಮಸ್ಕಿ ಪತ್ತಿನ ಸೌಹಾರ್ದ ಸಹಕಾರಿಯಲ್ಲಿ ಗಣರಾಜ್ಯೋತ್ಸವ ದಿನಾಚರಣೆ

❑ ನೈಜ್ಯ ದೆಸೆ ನ್ಯೂಸ್

**ಹಾಲಾಪೂರ: ಗ್ರಾಮದಲ್ಲಿರುವ ಮಸ್ಕಿ ಪತ್ತಿನ ಸೌಹಾರ್ದ ಸಹಕಾರಿ ಸಂಘದಲ್ಲಿ ಗಣರಾಜ್ಯೋತ್ಸವ ಧ್ವಜಾರೋಹಣ ಕಾರ್ಯಕ್ರಮ ನಡೆಯಿತು. ಅಧ್ಯಕ್ಷ ತಿರುಪತಿ ಜಂಗಮರಳ್ಳಿ ಧ್ವಜಾರೋಹಣ ನೆರವೇರಿಸಿ ಮಾತನಾಡಿ ಭಾರತವು ಪ್ರಜಾಪ್ರಭುತ್ವದ ಜನ್ಮಸ್ಥಳ, ರಾಜಪ್ರಭುತ್ವ, ಅರಸುತ್ತಿಗೆ ವ್ಯವಸ್ಥೆಯಿಂದ ಮುಕ್ತಗೊಳಿಸಲಾಯಿತು,**



ಭಾರತವು ವಿಶ್ವದಲ್ಲಿಯೇ ಅತ್ಯಂತ ಬೃಹತ್ತಾದ ಸಂವಿಧಾನ ಹೊಂದಿರುವ ದೇಶ, ನಮ್ಮ ಸಂವಿಧಾನದಲ್ಲಿ ಪ್ರತಿಪಾದಿಸಿದ ನ್ಯಾಯ,ಭ್ರಾತೃತ್ವ, ಸಹೋದರತ್ವ ಎಲ್ಲಾ ಆದರ್ಶಗಳು ಸಂವಿಧಾನದಲ್ಲಿ ಉಲ್ಲೇಖಿತವಾಗಿದ್ದು ಆದ್ದರಿಂದ ನಾವು ಸಂವಿಧಾನವನ್ನು ಗೌರವಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ನಿರ್ದೇಶಕರಾದ ಅಮರೇಶ ಪಾಟೀಲ್, ವೆಂಕಟೇಶ್ ಸಾಹುಕಾರ, ಅಮರೇಶ ವಾಯ್, ಮೌನೇಶ ವಟಗಲ, ಸಿದ್ದಾರ್ಥ ಪೊ. ಪಾಟೀಲ್, ಸಿದ್ದು ಬಿ , ವ್ಯವಸ್ಥಾಪಕರಾದ ಶರತಕುಮಾರ ಮಸ್ಕಿ, ಅನುಷಾ , ಬಸವರಾಜ ಇನ್ನಿತರರು ಇದ್ದರು.

## ದೇವದುರ್ಗ ಬಣಜಿಗ ಕ್ಷೇಮಾಭಿವೃದ್ಧಿ ಸಂಘಕ್ಕೆ ನೂತನ ಪಧಾಧಿಕಾರಿಗಳ ಆಯ್ಕೆ

❑ ನೈಜ್ಯ ದೆಸೆ ನ್ಯೂಸ್

**ಅರಕೇರಾ: ದಿನಾಂಕ 25 ಜನವರಿ 2026 ರಂದು ಪಟ್ಟಣದ ಖೇಣೇದ್ ಫಂಕ್ಷನ್ ಹಾಲಲ್ಲಿ ನಡೆದ ದೇವದುರ್ಗ ತಾಲೂಕು ಬಣಜಿಗ ಸಮಾಜ ಕ್ಷೇಮಾಭಿವೃದ್ಧಿ ಸಂಘಕ್ಕೆ ನೂತನ ಪಧಾಧಿಕಾರಿಗಳ ಪುನಾರಚನೆ ಮಾಡಿ ಆಯ್ಕೆ ಮಾಡಲಾಯಿತು.**

ಗೌರವಾಧ್ಯಕ್ಷರಾಗಿ ಪ್ರಕಾಶ ಖೇಣೇದ್, ಅಧ್ಯಕ್ಷರಾಗಿ ಮಲ್ಲಿಕಾರ್ಜುನ



ಪಾಟೀಲ್ ಅಮರಾಪುರ, ಉಪಾಧ್ಯಕ್ಷರಾಗಿ ಶರಣಗೌಡ ಮಾ. ಪಾ. ಬಿ. ಗಣೇಕಲ್, ವಿರೂಪಾಕ್ಷಪ್ಪ ಸಾಹುಕಾರ ಬಳೆ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಚಂದ್ರಶೇಖರ ವಿಭೂತಿ ವಕೀಲರು ಇವರನ್ನು ದೇವದುರ್ಗ ತಾಲೂಕು ಸರ್ವ ಬಣಜಿಗ ಸಮಾಜದ ಸದಸ್ಯರು ಸೇರಿ ಆಯ್ಕೆ ಮಾಡಲಾಯಿತು, ಸಮಾಜದ ಸಂಘಟನೆ ಹಾಗೂ ಧ್ವನಿಯಾಗಿ ಕೆಲಸ ಮಾಡಲು ನೂತನ ಅಧ್ಯಕ್ಷರಿಗೆ ಶುಭ ಕೋರಿ ತಿಳಿಸಲಾಯಿತು,, ವಿಶೇಷ ಅತಿಥಿಯಾಗಿ ಸಿದ್ರಾಮಪ್ಪ ಕಾಡ್ಲೂರು ರಾಜ್ಯ ಬಣಜಿಗ ಸಮಾಜದ ಕಾರ್ಯಕಾರಿ ಸಮಿತಿ ಸದಸ್ಯರು ಭಾಗವಹಿಸಿದ್ದರು,

ಸಭೆಯಲ್ಲಿ ಬಸವರಾಜಪ್ಪ ವಾರದ, ಬಸವರಾಜಪ್ಪ ಅಮರಾಪುರ,, ಶಿವರಾಜಪ್ಪ ಚಿಕ್ಕಬುದೂರು,, ಶರಣಪ್ಪ ಪಡಶೆಟ್ಟಿ, ಶಶಿಕಾಂತ ಜಾಲಹಳ್ಳಿ ಶರಣು ರಾಮದುರ್ಗ, ಶರಣು ಕೋರಿ, ರಾಜಪ್ಪ ಕೋರಿ, ಬಸವರಾಜ್ ಯಾಟಗಲ್, ಶಿವಕುಮಾರ್ ಹರವಿ , ಬಣಜಿಗ ಸಮಾಜದ ಗಣ್ಯರು ಹಿರಿಯರು ಯುವಕರು ಉಪಸ್ಥಿತರಿದ್ದರು.

## ಗಣರಾಜ್ಯೋತ್ಸವ; ಗಾಂಧೀಜಿ ಪುತ್ಥಳಿ ಮುಂದೆ ಸರ್ವಧರ್ಮ ಪ್ರಾರ್ಥನೆ



❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಗಣರಾಜ್ಯೋತ್ಸವದ ಅಂಗವಾಗಿ ನಗರದ ಮಹಾತ್ಮ ಗಾಂಧೀಜಿ ಪುತ್ಥಳಿಯ ಮುಂಭಾಗದಲ್ಲಿ ಸರ್ವಧರ್ಮ ಪ್ರಾರ್ಥನಾ ಕಾರ್ಯಕ್ರಮವು ಜನವರಿ 26ರಂದು ನಡೆಯಿತು. ಈ ವೇಳೆ ಲಕ್ಷ್ಮೀದೇವಿ, ಸುನೀತಾ, ನಾಗಶ್ರೀ, ಸೈಯದ್ ಇಸ್ಮಾಯಿಲ್ ಖಾದ್ರಿ, ವಿದ್ಯಾಸಾಗರ್ ಅವರು ಸರ್ವಧರ್ಮ ಪ್ರಾರ್ಥನೆಯಲ್ಲಿ ಭಾಗಿಯಾಗಿ ವಿವಿಧ ಧರ್ಮಗಳಲ್ಲಿನ ಅಂಶಗಳ ಕುರಿತು ಪ್ರಸ್ತುತಪಡಿಸಿದರು.**

ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಹಾತ್ಮಾ ಗಾಂಧೀಜಿ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಪ್ರಜಾಪ್ರಭುತ್ವದ ಮಹತ್ವ ತಿಳಿಸುವ ಭಾರತದ ಲಿಖಿತ ಸಂವಿಧಾನದ ಬಗ್ಗೆ ಪ್ರತಿಯೊಬ್ಬರು ಅರಿಯಬೇಕು. ಯುವಕರು, ವಿದ್ಯಾರ್ಥಿಗಳು ಸಂವಿಧಾನದ ಮಹತ್ವವನ್ನು ತಿಳಿದುಕೊಳ್ಳಬೇಕು. ಕಾನೂನಿನಡಿಯಲ್ಲಿ ನಾವೆಲ್ಲರೂ ಕಾರ್ಯ ನಿರ್ವಹಿಸಬೇಕೆಂದರು. ರಾಯಚೂರು ನಗರಸಭೆಯು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೇಗೇರಿ ವರ್ಷದೊಳಗೆ ಪಾಲಿಕೆಯ ಆಡಳಿತವನ್ನು ಬಲಪಡಿಸುವಲ್ಲಿ ನಾವು ನಾನಾ ಕ್ರಮಗಳನ್ನು ತೆಗೆದುಕೊಂಡಿದ್ದೇವೆ. ಇದಕ್ಕೆ ರಾಯಚೂರಿನ ಮಹಾನಗರ ಪಾಲಿಕೆಯ ಎಲ್ಲ ಸದಸ್ಯರು ಮತ್ತು ಮಾಧ್ಯಮದವರು ನೀಡಿದ ಸಹಕಾರ ಸ್ಮರಣೀಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಪಾಲಿಕೆಯ ಜೋನಲ್ ಆಯುಕ್ತರಾದ ಪುರುರಾಜ್ ಸಿಂಗ್ ಸೋಲಂಕಿ, ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಮಹಾನಗರ ಪಾಲಿಕೆಯ ಕಾರ್ಯನಿರ್ವಾಹಕ ಅಭಿಯಂತರಾದ ಬಸವರಾಜ್ ಹೆಬ್ಬಾರ್, ಪರಿಸರ ಅಭಿಯಂತರರಾದ ಜಯಪಾಲ್ ರೆಡ್ಡಿ, ಎನ್.ವಿ.ಡಿ ಸ್ಪರ್ಧಾ ಕಾರ್ಯಕ್ರಮದ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ, ಭಾರತ ಸೇವಾ ದೇಳದ ವಿದ್ಯಾಸಾಗರ್, ಭರತ್, ಶರಣಪ್ಪ ಸೇರಿದಂತೆ ಇತರರು ಇದ್ದರು.

## ಮಸ್ಕಿಯಲ್ಲಿ ಬೀದಿ ನಾಯಿಗಳ ದಾಳಿ! 7 ಮಕ್ಕಳು ಸೇರಿ 10 ಜನರಿಗೆ ಗಾಯ । ಭಯದ ವಾತಾವರಣ । ತಕ್ಷಣ ಕ್ರಮಕ್ಕೆ ಆಗ್ರಹ”

❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಮಸ್ಕಿ ಪಟ್ಟಣದ ಸೋಮನಾಥ ನಗರ ಹಾಗೂ ಪಿಂಜಾರ್ ಓಣಿಯಲ್ಲಿ ಜನವರಿ 25ರ ಬೆಳಿಗ್ಗೆ ಬೀದಿ ನಾಯಿಗಳ ದಾಳಿಯಿಂದ ಏಳು ಜನ ಮಕ್ಕಳು ಮತ್ತು ಮೂವರು ಹಿರಿಯ ನಾಗರಿಕರುಗಾಯಗೊಂಡಿರುವ ಘಟನೆ ನಡೆದಿದೆ. ಈ ಘಟನೆಯಿಂದಾಗಿ ಆ ಪ್ರದೇಶದಲ್ಲಿ ಜನರು ಭಯಭೀತ ಸ್ಥಿತಿಯಲ್ಲಿ ಬದುಕುವಂತಾಗಿದೆ. ಮಕ್ಕಳನ್ನು ಹೊರಗೆ ಬಿಡಲು ಪೋಷಕರು ಆತಂಕದಲ್ಲಿದ್ದಾರೆ.**



ಈ ಹಿನ್ನೆಲೆಯಲ್ಲಿ ಆಯುಶ್ ವೈದ್ಯರಾದ ಶ್ರೀದೇವಿ ಹಾಗೂ ಮಸ್ಕಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಾದ ಡಾ. ಮಹೇಶ ಅವರು ಜನವರಿ 26 ರಂದು ಪುರಸಭೆ ಮಸ್ಕಿಗೆ ಪತ್ರ ಬರೆದು ಮಹತ್ವದ ಮನವಿ ಸಲ್ಲಿಸಿದ್ದಾರೆ. ಬೀದಿ ನಾಯಿಗಳನ್ನು ಹಿಡಿದು ಸಂತಾನ ಹರಣ ಮಾಡಬೇಕು, ಅವುಗಳಿಗೆ ಲಸಿಕೆ ಹಾಕಿ ನಾಯಿಗಳ ಹಾವಳಿಗೆ ತಕ್ಷಣ ಕಡಿವಾಣ ಹಾಕಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಜನರ ಸುರಕ್ಷತೆಗಾಗಿ ಪುರಸಭೆ ಮತ್ತು ಸಂಬಂಧಿಸಿದ ಇಲಾಖೆಗಳು ತಕ್ಷಣ ಕ್ರಮ ಕೈಗೊಳ್ಳಬೇಕೆಂಬುದು ಸ್ಥಳೀಯರ ಆಗ್ರಹವಾಗಿದೆ.

## ಕಾರ್ಮಿಕ ವಿರೋಧಿ ನೀತಿಗಳಿಗೆ ಕಿಡಿ ಫೆಬ್ರವರಿ 12ರಂದು ಅಖಿಲ ಭಾರತ ಸಾರ್ವತ್ರಿಕ ಮುಷ್ಕರಕ್ಕೆ ಎಐಸಿಸಿಟಿಯು ಕರೆ

❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಾರಿಗೆ ತಂದಿರುವ ಕಾರ್ಮಿಕ ವಿರೋಧಿ, ರೈತ ವಿರೋಧಿ ಮತ್ತು ಜನ ವಿರೋಧಿ ನೀತಿಗಳನ್ನು ತಕ್ಷಣವೇ ಹಿಂಪಡೆಯಬೇಕು ಎಂದು ಆಗ್ರಹಿಸಿ, ಫೆಬ್ರವರಿ 12ರಂದು ಅಖಿಲ ಭಾರತ ಸಾರ್ವತ್ರಿಕ ಮುಷ್ಕರವನ್ನು ಯಶಸ್ವಿಗೊಳಿಸಲು ಎಐಸಿಸಿಟಿಯು (AICCTU) ಸಂಘಟನೆ ಕರೆ ನೀಡಿದೆ.**

ಪಟ್ಟಣದ ವಾಲ್ಮೀಕಿ ವೃತ್ತದ ಬಳಿ ಎಐಸಿಸಿಟಿಯು ಮಸ್ಕಿ ಘಟಕದ ಪದಾಧಿಕಾರಿಗಳು ಪ್ರತಿಭಟನೆ ನಡೆಸಿ, ಕರಪತ್ರಗಳನ್ನು ಹಂಚುವ ಮೂಲಕ ಮುಷ್ಕರದ ಕುರಿತು ವ್ಯಾಪಕ ಪ್ರಚಾರ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಎಐಸಿಸಿಟಿಯು ಜಿಲ್ಲಾ ಅಧ್ಯಕ್ಷ ಅಜೀಜ್ ಜಾಗೀರ್ದಾರ್, ದುಡಿಯುವ ವರ್ಗಗಳ ಹಕ್ಕುಗಳನ್ನು ಕುಗ್ಗಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ 4 ಕಾರ್ಮಿಕ




ಸಂಹಿತೆಗಳನ್ನು ಜಾರಿಗೆ ತಂದಿದ್ದು, ಇದರಿಂದ ಕಾರ್ಮಿಕರ ಬದುಕು ಮತ್ತಷ್ಟು ಅಸ್ಥಿರವಾಗುತ್ತಿದೆ ಎಂದು ಕಿಡಿಕಾರಿದರು. ಕಾರ್ಮಿಕರ ಕಲ್ಯಾಣಕ್ಕೆ ಪೂರಕವಾಗಬೇಕಾದ ಸರ್ಕಾರಗಳು, ಉದ್ಯೋಗ ಭದ್ರತೆ ಕಿತ್ತುಕೊಳ್ಳುವಂತಹ ಕಾನೂನುಗಳನ್ನು ಜಾರಿಗೆ ತಂದು ಜನರನ್ನು ಸಂಕಷ್ಟಕ್ಕೆ ದೂಡುತ್ತಿವೆ.ಈ ಹಿನ್ನೆಲೆಯಲ್ಲಿ ನೂತನ 4 ಕಾರ್ಮಿಕ ಸಂಹಿತೆಗಳ ಸಂಪೂರ್ಣ ರದ್ದತಿ ಉದ್ಯೋಗ ಖಾತ್ರಿ ಯೋಜನೆಯ ತಿದ್ದುಪಡಿಗೆ ವಿರೋಧ, ಶಿಕ್ಷಣ ನೀತಿಯ ವಿರುದ್ಧ ಹೋರಾಟ, ರಾತ್ರಿ ಪಾಳಿಯಲ್ಲಿ ಮಹಿಳಾ ಕಾರ್ಮಿಕರ ದುಡಿಮೆಗೆ ಒತ್ತಾಯ, ಕೆಲಸದ ಅವಧಿಯನ್ನು 12 ಗಂಟೆಗೆ ವಿಸ್ತರಿಸುವ ಆದೇಶಗಳ ವಾಪಸ್, ಈ ಎಲ್ಲ ಕಾರ್ಮಿಕ ವಿರೋಧಿ ನಿರ್ಧಾರಗಳ ವಿರುದ್ಧ ದೇಶದಾದ್ಯಂತ ಅಖಿಲ ಭಾರತ ಸಾರ್ವತ್ರಿಕ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ಮಸ್ಕಿ ತಾಲೂಕಿನಲ್ಲೂ ಈ ಮುಷ್ಕರವನ್ನು ಅತ್ಯಂತ ವ್ಯಾಪಕವಾಗಿ ನಡೆಸಲಾಗುತ್ತಿದ್ದು, ನೂರಾರು ಸಂಖ್ಯೆಯಲ್ಲಿ ಕಾರ್ಮಿಕರು ಹಾಗೂ ದುಡಿಯುವ ವರ್ಗದ ಜನರು ಭಾಗವಹಿಸಿ ಮುಷ್ಕರವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಹನಮಂತಪ್ಪ ವೆಂಕಟಾಪುರ್, ಲಿಂಗನಗೌಡ, ಹನುಮಂತ ನಾಯಕ್, ಮಹೆಬೂಬ್ ಏಕೋಬ, ನವೀನ್, ಫರೀದ್ ಸೇರಿದಂತೆ ಇತರ ಕಾರ್ಮಿಕ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ರಾಯಚೂರು ಉತ್ಸವದ ಸೈಕ್ಲಾಥಾನ್: ಉತ್ಸಾಹದಿಂದ 20 ಕಿ.ಮೀ ಸೈಕಲ್ ತುಳಿದ ಸ್ಪರ್ಧಾಳುಗಳು

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಜಿಲ್ಲಾ ಉತ್ಸವದ ಕ್ಯಾಲೆಂಡರ್ನಂತೆ ಜನವರಿ 27ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗಳ ಸಹಯೋಗದಲ್ಲಿ ಸೈಕ್ಲಾಥಾನ್ ಆಯೋಜನೆ ಮಾಡಲಾಗಿತ್ತು. ಸೈಕಲ್ ಮ್ಯಾರಾಥಾನದಲ್ಲಿ ಭಾಗಿಯಾಗಲು ಬೆಳಗ್ಗೆ 6 ಗಂಟೆ ವೇಳೆಗೆ ನಗರದ ಮಹಾತ್ಮ ಗಾಂಧೀಜಿ ಕ್ರೀಡಾಂಗಣದತ್ತ ವೈದ್ಯರು ಸೇರಿದಂತೆ ಸೈಕಲ್ ಅಸೋಸಿಯೇಷನ್ ಸದಸ್ಯರು, ಶಾಲಾ-ಕಾಲೇಜಿನ ವಿದ್ಯಾರ್ಥಿಗಳು, ಯುವಜನರು, ನಾನಾ ಬಗೆಯ ತಮ್ಮ ತಮ್ಮ ನೆಚ್ಚಿನ ಸೈಕಲ್ ಏರಿ ಆಗಮಿಸಿ ಸ್ಪರ್ಧೆಯಲ್ಲಿ ಉತ್ಸಾಹದಿಂದ ಭಾಗಿಯಾದರು.**

ಬೆಳಗ್ಗೆ, ಸೈಕಲ್ ಏರಿ ಜಿಲ್ಲಾ ಕ್ರೀಡಾಂಗಣದತ್ತ ಆಗಮಿಸಿದ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸೈಕಲ್ ತುಳಿಯುತ್ತ ಸೈಕಲ್ ಮ್ಯಾರಾಥಾನಗೆ ಹಸಿರು ನಿಶಾನೆ ತೋರಿದರು.




ಜಿಲ್ಲಾ ಕ್ರೀಡಾಂಗಣದಿಂದ ಸೈಕಲ್ ಸವಾರಿ ಆರಂಭಿಸಿದ ಸ್ಪರ್ಧಾಳುಗಳು ಬಸವೇಶ್ವರ ವೃತ್ತ, ಜಿಲ್ಲಾ ಪಂಚಾಯತ್, ಕನಕದಾಸ ವೃತ್ತ, ಎಸ್ಪಿ ಕಚೇರಿ ಮಾರ್ಗವಾಗಿ ಯರಮರಸ್, ಬೈಪಾಸ್ ಮೂಲಕ ಯಕ್ಲಾಸಪೂರ್, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಮಾರ್ಗವಾಗಿ ಮರಳಿ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ಸೇರಿದರು. ಸೈಕಲ್ ಸವಾರರ ಸುರಕ್ಷತೆ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯಿಂದ ಎಲ್ಲ ರೀತಿಯ ಸುರಕ್ಷತಾ ಕ್ರಮ ವಹಿಸಲಾಗಿತ್ತು. ಸೈಕಲ್ ಸವಾರರ ಮುಂದೆ ಪೊಲೀಸ್ ಕಾನ್ವೆಗೆ ವ್ಯವಸ್ಥೆ ಮಾಡಲಾಗಿತ್ತು. ಈ ಸ್ಪರ್ಧೆಯಲ್ಲಿ ಬೆಲಂ ಪ್ರಕಾಶ್ ಅವರು ಪ್ರಥಮ ಬಹುಮಾನ, ರಾಘವೇಂದ್ರ ಗುಪ್ತ ದ್ವಿತೀಯ ಬಹುಮಾನ ಮತ್ತು ಸಣ್ಣ ವೀರೇಶ ಅವರು ತೃತೀಯ ಬಹುಮಾನ ಗಿಟ್ಟಿಸಿದರು.

ಈ ಸ್ಪರ್ಧೆಯಲ್ಲಿ ಏಕೈಕ ಮಹಿಳಾ ಪಟುವಾಗಿ ಡಾ.ಶಿಲ್ಪ ಅವರು ಭಾಗಿಯಾಗಿ ಗಮನ ಸೆಳೆದರು. ಪ್ರಥಮ ಸ್ಥಾನಕ್ಕೆ 10 ಸಾವಿರ ರೂ., ದ್ವಿತೀಯ ಸ್ಥಾನಕ್ಕೆ 5 ಸಾವಿರ ಹಾಗೂ ತೃತೀಯ ಸ್ಥಾನಕ್ಕೆ 3 ಸಾವಿರ ರೂ.ಗಳನ್ನು ನೀಡಿ ಗೌರವಿಸಲಾಯಿತು. ಶಾಲಾ ವಿದ್ಯಾರ್ಥಿಗಳು ಭಾಗಿ: ಈ ಸೈಕಲ್ ಮ್ಯಾರಾಥಾನ್‌ದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವೈದ್ಯರು ಭಾಗಿಯಾಗಿದ್ದು ವಿಶೇಷವಾಗಿತ್ತು. ವಿದ್ಯಾರ್ಥಿಗಳಾದ ಹಸನ್, ಶ್ರೇಯಸ್, ಗಣೇಶ್ ಮಿಶ್ರಬ್, ಮಹಮ್ಮದ್ ಆಸಂಖಾನ್, ದೇವರಾಜ್, ಮನೀಶ್, ಶ್ರೇಯಾಂಕ ಅವರು ಸಹ ಭಾಗಿಯಾಗಿ ಸೈಕಲ್ ಓಡಿಸಿ ಸಂಭ್ರಮಿಸಿದರು.

ಇದೇ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಸೀಲ್ದಾರ್ ಸುರೇಶ್ ವರ್ಮ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಶಾವಂತಗೇರಿ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ್ ನಾಯಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್, ಎನ್.ವಿ.ಡಿ ಸ್ಪರ್ಧಾ ಕಾರ್ಯಕ್ರಮದ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ, ಲಿವಿಂಗ್ ಆಫ್ ಆರ್ಟ ಸಂಸ್ಥೆಯ ಮಲ್ಲಿಕಾರ್ಜುನ ಸ್ವಾಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗವಿಸಿದ್ದಪ್ಪ ಹೊಸಮನಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರು, ಸೈಕ್ಲಿಂಗ್ ಅಸೋಸಿಯೇಷನ್ ಅಧ್ಯಕ್ಷರಾದ ಡಾ.ಬಸವರಾಜ, ಕೃಷ್ಣ ತುಂಗೆ ರೋಟರಿ ಕ್ಲಬ್‌ನ ಪದಾಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### M.Sc. ಮೆಡಿಕಲ್ ಇಮೇಜಿಂಗ್ ಟೆಕ್ನಾಲಜಿ

M.Sc. in Respiratory Therapy (therapy and care) ಉಸಿರಾಟದ ಚಿಕಿತ್ಸೆಯಲ್ಲಿ ಸ್ನಾತಕೋತ್ತರ ವಿಜ್ಞಾನವು ಸ್ನಾತಕೋತ್ತರ ಹಂತದ ಕಾರ್ಯಕ್ರಮವಾಗಿದ್ದು, ಉಸಿರಾಟದ ಚಿಕಿತ್ಸಕರಿಗೆ ಉಸಿರಾಟದ ಅಸ್ವಸ್ಥತೆಗಳನ್ನು ತಡೆಗಟ್ಟಲು, ರೋಗನಿರ್ಣಯ ಮಾಡಲು, ಚಿಕಿತ್ಸೆ ನೀಡಲು ಮತ್ತು ನಿರ್ವಹಿಸಲು ಸುಧಾರಿತ ಕ್ಲಿನಿಕಲ್ ಅಭ್ಯಾಸ ಮತ್ತು ಸಂಶೋಧನಾ ಕೌಶಲ್ಯಗಳಲ್ಲಿ ತರಬೇತಿ ನೀಡುತ್ತದೆ. ಈ ಕಾರ್ಯಕ್ರಮಕ್ಕೆ ಉಸಿರಾಟದ ಚಿಕಿತ್ಸೆ ಅಥವಾ ಸಂಬಂಧಿತ ಕ್ಷೇತ್ರದಲ್ಲಿ ಸ್ನಾತಕೋತ್ತರ ಪದವಿ ಅಗತ್ಯವಿರುತ್ತದೆ ಮತ್ತು ಸಾಮಾನ್ಯವಾಗಿ ಪೂರ್ಣಗೊಳ್ಳಲು ಎರಡು ವರ್ಷಗಳು ಬೇಕಾಗುತ್ತದೆ. ಪದವೀಧರರು ಆರೋಗ್ಯ ಸಂಸ್ಥೆಗಳಲ್ಲಿ ಕ್ಲಿನಿಕಲ್ ಅಭ್ಯಾಸ, ಶಿಕ್ಷಣ, ಸಂಶೋಧನೆ ಮತ್ತು ನಾಯಕತ್ವದ ಪಾತ್ರಗಳನ್ನು ಒಳಗೊಂಡಂತೆ ವಿವಿಧ ವೃತ್ತಿ ಮಾರ್ಗಗಳನ್ನು ಅನುಸರಿಸಬಹುದು. ಅವರು ಆಸ್ಪತ್ರೆಗಳು, ಚಿಕಿತ್ಸಾಲಯಗಳು, ಉಸಿರಾಟದ ಚಿಕಿತ್ಸಾ ವಿಭಾಗಗಳು, ದೀರ್ಘಕಾಲೀನ ಆರೈಕೆ ಸೌಲಭ್ಯಗಳು ಮತ್ತು ಸಂಶೋಧನಾ ಸಂಸ್ಥೆಗಳಲ್ಲಿ ಕೆಲಸ ಮಾಡಬಹುದು. ಎಂ.ಎಸ್ಸಿ. ಉಸಿರಾಟದ ಚಿಕಿತ್ಸೆ ಕಾರ್ಯಕ್ರಮವು ಉಸಿರಾಟದ ಚಿಕಿತ್ಸೆಯಲ್ಲಿ ಸುಧಾರಿತ ತರಬೇತಿಯನ್ನು ನೀಡುತ್ತದೆ, ಇದರಲ್ಲಿ ಸುಧಾರಿತ ಉಸಿರಾಟದ ಆರೈಕೆ, ಕ್ಲಿನಿಕಲ್ ತರಬೇತಿ, ಸಂಶೋಧನಾ ಕೌಶಲ್ಯಗಳು ಮತ್ತು ನಿರ್ವಹಣೆ ಮತ್ತು ನಾಯಕತ್ವ ಕೌಶಲ್ಯಗಳು ಸೇರಿವೆ. ಪದವೀಧರರು ಆಸ್ಪತ್ರೆಗಳು, ಚಿಕಿತ್ಸಾಲಯಗಳು, ಸಂಶೋಧನಾ ಸಂಸ್ಥೆಗಳು ಮತ್ತು ಉಸಿರಾಟದ ಚಿಕಿತ್ಸೆಯಲ್ಲಿ ನಾಯಕತ್ವದ ಸ್ಥಾನಗಳಲ್ಲಿ ವೃತ್ತಿಜೀವನವನ್ನು ಮುಂದುವರಿಸಬಹುದು. ಉಸಿರಾಟದ ಚಿಕಿತ್ಸೆ ಅಥವಾ ಸಂಬಂಧಿತ ಕ್ಷೇತ್ರಗಳಲ್ಲಿ ಪಿಎಚ್‌ಡಿ ಪದವಿ ಪಡೆಯುವ ಮೂಲಕ ಅವರು ತಮ್ಮ ಶಿಕ್ಷಣವನ್ನು ಮುಂದುವರಿಸಬಹುದು. ಎನ್ನುವುದು 2 ವರ್ಷಗಳ ಅವಧಿಯ ಸ್ನಾತಕೋತ್ತರ (Postgraduate) Allied Health Science ಕೋರ್ಸ್ ಆಗಿದೆ. ಇದು ಉಸಿರಾಟದ ತೊಂದರೆಗಳು ಮತ್ತು ಹೃದಯ–ಶ್ವಾಸಕೋಶದ ಕಾಯಿಲೆಗಳ ತಡೆಗಟ್ಟುವಿಕೆ, ರೋಗನಿರ್ಣಯ ಮತ್ತು ಚಿಕಿತ್ಸೆಯಲ್ಲಿ ಉನ್ನತ ತರಬೇತಿಯನ್ನು ನೀಡುತ್ತದೆ. ಈ ಕೋರ್ಸ್‌ನ ವಿವರವಾದ ಮಾಹಿತಿ ಇಲ್ಲಿದೆ: ಕೋರ್ಸ್ ವಿವರಗಳು (Course Highlights) ಕೋರ್ಸ್ ಹೆಸರು: M.Sc. Respiratory Therapy (Master of Science in Respiratory Therapy) ಅವಧಿ (Duration): 2 ವರ್ಷಗಳು (4 ಸೆಮಿಸ್ಟರ್‌ಗಳು) ಅರ್ಹತೆ (Eligibility): B.Sc. Respiratory Care Technology / Respiratory Therapy / Critical Care Therapy ನಲ್ಲಿ ಕನಿಷ್ಠ 50% ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. 1 ವರ್ಷದ ಇಂಟರ್ನ್‌ಶಿಪ್ ಪೂರ್ಣಗೊಳಿಸಿರಬೇಕು. ಪ್ರವೇಶಾತಿ (Admission): ಯೆನೆಪೊಯ (Yenepoya), ಮಣಿಪಾಲ್ (MAHE), ಕಸ್ತೂರ್ಬಾ ಮೆಡಿಕಲ್ ಕಾಲೇಜು (KMC) ಮುಂತಾದ ಸಂಸ್ಥೆಗಳಲ್ಲಿ ಪ್ರವೇಶ ಲಭ್ಯವಿದೆ. ಪಠ್ಯಕ್ರಮ (Syllabus/ Course Content) ಈ ಕೋರ್ಸ್‌ನಲ್ಲಿ ಸುಧಾರಿತ ಶ್ವಾಸಕೋಶದ ಆರೈಕೆ, ಲ್ ತರಬೇತಿ ಮತ್ತು ಸಂಶೋಧನಾ ಕೌಶಲ್ಯಗಳಿಗೆ ಒತ್ತು ನೀಡಲಾಗುತ್ತದೆ: ಸುಧಾರಿತ ಉಸಿರಾಟದ ಚಿಕಿತ್ಸೆ (Advanced Respiratory Therapy Science) ಕ್ರಿಟಿಕಲ್ ಕೇರ್ ಮೆಡಿಸಿನ್ (Critical Care Medicine) ಮೆಕ್ಯಾನಿಕಲ್ ವೆಂಟಿಲೇಶನ್ ಮತ್ತು ಐಸಿಯು ನಿರ್ವಹಣೆ (Ventilator Management & ICU) ಪಲ್ಮನರಿ ಫಂಕ್ಷನ್ ಟೆಸ್ಟ್ (Pulmonary Function Test - PFT) ಆಮ್ಲಜನಕ ಚಿಕಿತ್ಸೆ ಮತ್ತು ಔಷಧಿ ನಿರ್ವಹಣೆ (Medical Gas Therapy) ನವಜಾತ ಮತ್ತು ಮಕ್ಕಳ ಉಸಿರಾಟದ ಆರೈಕೆ (Neonatal & Pediatric Care) ಸಂಶೋಧನಾ ವಿಧಾನಗಳು (Research Methodology) ಉದ್ಯೋಗಾವಕಾಶಗಳು (Career Prospects) ಕೋರ್ಸ್ ಮುಗಿದ ನಂತರ ಈ ಕೆಳಗಿನ ಹುದ್ದೆಗಳನ್ನು ಪಡೆಯಬಹುದು: ರೆಸ್ಪಿರೇಟರಿ ಥೆರಪಿಸ್ಟ್ (Respiratory Therapist): ಆಸ್ಪತ್ರೆಗಳಲ್ಲಿ, ವಿಶೇಷವಾಗಿ ಐಸಿಯು (ICU) ನಲ್ಲಿ. ಕ್ರಿಟಿಕಲ್ ಕೇರ್ ಸ್ಪೆಷಲಿಸ್ಟ್ (Critical Care Specialist) ಪಲ್ಮನರಿ ಫಂಕ್ಷನ್ ಟೆಕ್ನಾಲಜಿಸ್ಟ್ (Pulmonary Diagnostics Technologist) ಕ್ಲಿನಿಕಲ್ ಅಪ್ಲಿಕೇಶನ್ ಸ್ಪೆಷಲಿಸ್ಟ್ (Clinical Application Specialist): ವೆಂಟಿಲೇಟರ್ ತಯಾರಕ ಕಂಪನಿಗಳಲ್ಲಿ. ಶಿಕ್ಷಕರು/ಉಪನ್ಯಾಸಕರು (Academic Faculty): ಅಲೈಡ್ ಹೆಲ್ತ್ ಕಾಲೇಜುಗಳಲ್ಲಿ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ರಾಯಚೂರು ಉತ್ಸವದ ಜ್ಯೋತಿ ರಥಯಾತ್ರೆಗೆ ಅಗತ್ಯ ಸಿದ್ಧತೆಯಾಗಲಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ ಆಚರಣೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹಮ್ಮಿಕೊಂಡ ಜ್ಯೋತಿ ರಥಯಾತ್ರೆ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.**

ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿನ ಪಾಲಿಕೆಯ ಕೋರ್ಟ್ ಹಾಲನಲ್ಲಿ ಜನವರಿ 27ರಂದು ನಡೆದ ಸಭೆಯಲ್ಲಿ ಮಾತನಾಡಿದ ಅಪರ ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲಾ ಉತ್ಸವವು ಫೆ.5 ರಿಂದ ಫೆ.7ರವರೆಗೆ ನಡೆಯಲಿದೆ. ಉತ್ಸವದಲ್ಲಿ ಕನ್ನಡ ನಾಡು ನುಡಿಯ ಬಗ್ಗೆ ಜನತೆಗೆ ತಿಳಿಸಿ ಜಾಗೃತಿ ಮೂಡಿಸಲು ಫೆ.1ರಂದು ಹಮ್ಮಿಕೊಂಡ ಜ್ಯೋತಿ ರಥಯಾತ್ರೆಯು ರಾಯಚೂರು ಸಿಟಿಯಿಂದ ಹೊರಟು ರಾಯಚೂರು ಜಿಲ್ಲೆಯಾದ್ಯಂತ ವಿವಿಧೆಡೆ ಸಂಚರಿಸಲಿದೆ ಎಂದು ತಿಳಿಸಿದರು. ಈ ಜ್ಯೋತಿ ರಥಯಾತ್ರೆಯ ಚಾಲನಾ ಕಾರ್ಯಕ್ರಮವು ಫೆ.1ರಂದು ಬೆಳಗ್ಗೆ 10.30ಕ್ಕೆ ರಾಯಚೂರು ಸಿಟಿಯ ಹೃದಯ ಭಾಗದಲ್ಲಿನ ಐತಿಹಾಸಿಕ ಕರ್ನಾಟಕ ಸಂಘದ ಆವರಣದಿಂದ



ಹೊರಡುವುದು. ಈ ಕಾರ್ಯಕ್ರಮ ಹಿನ್ನೆಲೆಯಲ್ಲಿ ನಮ್ಮೆಲ್ಲರ ನೆಚ್ಚಿನ ಐತಿಹಾಸಿಕ ಕರ್ನಾಟಕ ಸಂಘದ ಆವರಣವನ್ನು ಹಬ್ಬದ ರೀತಿಯಲ್ಲಿ ಸಿದ್ಧಪಡಿಸಿ ಅಲಂಕಾರಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಯಚೂರು ಜಿಲ್ಲಾ ಉತ್ಸವದ ಬಗ್ಗೆ ಮಾಹಿತಿ ನೀಡುವುದರ ಜೊತೆಗೆ ನಮ್ಮ ಕಲೆ, ಸಂಸ್ಕೃತಿ, ಕನ್ನಡ ನಾಡು ನುಡಿಯ ಬಗ್ಗೆ ಅರಿವು ಮೂಡಿಸುವ ದಿಶೆಯಲ್ಲಿ ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳನ್ನು ಸೇ–ರಿಸಲು ಸಾರ್ವಜನಿಕ ಶಿಕ್ಷಣ ಶಿಕ್ಷಣ ಇಲಾಖೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು. ಜ್ಯೋತಿ ರಥಯಾತ್ರೆ ಚಾಲನಾ ಕಾರ್ಯಕ್ರಮಕ್ಕೆ ಪ್ರತಿ ವಸತಿ ನಿಲಯಗಳಿಂದ ಇಂತಿಷ್ಟು ವಿದ್ಯಾರ್ಥಿಗಳನ್ನು ಕರೆ ತರಬೇಕು ಎಂದು ಸಮಾಜ ಕಲ್ಯಾಣ ಇಲಾಖೆ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾ–ರಿಗಳಿಗೆ ಗುರಿ ನೀಡಲಾಯಿತು. ನಮ್ಮ ನಮ್ಮ ಇಲಾಖೆಯ ತಾಲೂಕು ಅಧಿಕಾರಿಗಳಿಗೆ, ಆಯಾ ಹಾಸ್ಟೇಲ್ ವಾರ್ಡನಗಳಿಗೆ ಜವಾಬ್ದಾರಿ ವಹಿಸಿ ಹಾಸ್ಟೇಲ್ ವಿದ್ಯಾರ್ಥಿಗಳನ್ನು ಸೇ–ರಿಸುವುದಾಗಿ ಅಧಿಕಾರಿಗಳು ತಿಳಿಸಿದರು.

ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಒಂದೇ ಬಗೆಯ ಸೀರೆಯೊಂದಿಗೆ, ಶಿಸ್ತುಬದ್ಧವಾಗಿ ಜ್ಯೋತಿ ರಥಯಾತ್ರೆ ಚಾಲನಾ ಕಾರ್ಯಕ್ರಮದಲ್ಲಿ ಭಾಗಿಯಾಗುವಂತೆ ಏರ್ಪಾಡು ಮಾಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಿಗೆ ಸೂಚನೆ ನೀಡಲಾಯಿತು. ರಾಯಚೂರು ಜಿಲ್ಲೆಯ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ತಹಸೀಲ್ದಾರರು, ಜಿಲ್ಲೆಯ ಎಲ್ಲಾ ಪುರಸಭೆ ಹಾಗೂ ಪಟ್ಟಣ ಪಂಚಾಯತಿಗಳ ಮುಖ್ಯಾಧಿಕಾ–ರಿಗಳು, ಜಿಲ್ಲೆಯ ಎಲ್ಲಾ ತಾಲೂಕು ಆರೋಗ್ಯ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ಆರಕ್ಷಕ ಉಪ ನಿರೀಕ್ಷಕರು, ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾ–ರಿಗಳು ಈ ಸಮಿತಿಯ ಸದಸ್ಯರಾಗಿದ್ದು ಈ ಬಗ್ಗೆ ಗಮನ ಹರಿಸಿ ಜ್ಯೋತಿ ರಥಯಾತ್ರೆಯು ಎಲ್ಲಾ ಕಡೆಗಳಲ್ಲಿ ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾ–ರಿಗಳು ಸಭೆಯ ಮೂಲಕ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಜ್ಯೋತಿ ರಥಯಾತ್ರೆ ಸಮಿತಿಯ ಅಧ್ಯಕ್ಷರಾದ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧೂ, ಡಿವೈಎಸ್ಪಿ ಶಾಂತವೀರ, ಸಮಿತಿಯ ಸದಸ್ಯ ಕಾರ್ಯದರ್ಶಿ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ ಸೇರಿದಂತೆ ಇನ್ನಿತರರು ಇದ್ದರು.

# ಪ್ರತಿಯೊಬ್ಬರು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ :ತಹಶೀಲ್ದಾರ್ ಗಗನಸಿಂಧು.

ನೈಜ್ಯ ದೆಸೆ ನ್ಯೂಸ್

**ಶಿಡ್ಲಘಟ್ಟ: ಸವಿತಾ ಎಂದರೆ ಬೆಳಕು ಸವಿತಾ ಸಮಾಜದ ಮೂಲ ಪುರುಷರಾದ ಸವಿತಾ ಮಹರ್ಷಿಗಳು ಪರಶಿವನ ಬಲಗಣ್ಣಿನಿಂದ ಜನಿಸಿದವರಾಗಿದ್ದು ಸೂರ್ಯವಂಶದ ಕುಲದೈವರಾಗಿದ್ದಾರೆ. ಅಪಾರ ಜ್ಞಾನ ಹೊಂದಿದ್ದ ಇವರು ಸಾಮವೇದವನ್ನು ರಚಿಸಿದ್ದು ಸಂಗೀತದ ಪ್ರತೀಕವಾಗಿದ್ದಾರೆ ಇವರ ಪುತ್ರಿ ಗಾಯತ್ರಿ ದೇವಿ ಗಾಯತ್ರಿ ಮಂತ್ರವನ್ನು ರಚಿಸಿದ್ದಾರೆ' ಎಂದು ತಹಸೀಲ್ದಾರ್ ಗಗನ ಸಿಂಧೂ ತಿಳಿಸಿದರು.**

ತಾಲ್ಲೂಕು ಆಡಳಿತ ಸೌಧದ ಸಭಾಂಗಣದಲ್ಲಿ ಮಂಗಳವಾರದಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಶ್ರೀ ಸವಿತಾ ಮಹರ್ಷಿ ಜಯಂತೋತ್ಸವ ಕಾರ್ಯಕ್ರಮವನ್ನ ಉದ್ದೇಶಿಸಿ ಮಾತನಾಡಿದ ಅವರು ಸವಿತಾ ಮಹರ್ಷಿಗಳು ಶೋಷಿತ ವರ್ಗದವರನ್ನು ಶೈಕ್ಷಣಿಕವಾಗಿ ಮೇಲೆ ತರಲು ಹೋರಾಡಿದ್ದರು.




ಇಂತಹ ವ್ಯಕ್ತಿಗಳನ್ನು ಪಡೆದ ಸಮಾಜವು ಕೀಳರಿಮೆ ತೊರೆಯಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು. ಇದರಿಂದ ಸಮಾಜದಲ್ಲಿ ಮುನ್ನಡೆಯಲು ಸಾಧ್ಯವಾಗುತ್ತದೆ ಎಂದರು. ಸವಿತಾ ಮಹರ್ಷಿ ಸೇರಿದಂತೆ ಋಷಿ?ಮಹರ್ಷಿಗಳು ಯಾವುದೇ ಸಮಾಜ, ಜನಾಂಗದಲ್ಲಿ ಹುಟ್ಟಿದರೂ ಧರ್ಮದ ದಾರಿ ತೋರಿಸಿದ್ದಾರೆ. ಅವರ ಸಂದೇಶಗಳ ಪಾಲನೆಯಿಂದ ನಮ್ಮ ಬದುಕು ಹಸನಾಗುತ್ತದೆ ಕಾಯಕವೇ ಕೈಲಾಸ ಎಂದು ಸವಿತಾ ಸಮಾಜದ ಜನ ಜೀವನ ನಡೆಸುತ್ತಾರೆ.

ಸಮಾಜದಲ್ಲಿ ಶೈಕ್ಷಣಿಕವಾಗಿ, ರಾಜ–ಕೀಯವಾಗಿ ಬೆಳೆದವರು ಬಹಳ ಕಡಿಮೆ. ಸವಿತಾ ಸಮಾಜ ಕಾಯಕದಿಂದ ಒಂದೇಯಾಗಿದ್ದು, ಸಮಾಜದ ಎರಡೂ ಪಂಗಡ ಒಗ್ಗಟ್ಟಾಗಬೇಕು. ಇದರಿಂದ ಸಮಾಜಕ್ಕೆ ಬಲ ಬರುತ್ತದೆ. ರಾಜ–ಕೀಯವಾಗಿ ಶಕ್ತಿ ಸಿಗುತ್ತದೆ. ನಾವು ಕೂಡ ನಿಮ್ಮ ಬೆಂಬಲಕ್ಕೆ ಇರುತ್ತೇವೆ' ಎಂದರು ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸವಿತಾ ಸಮಾಜ ಅಧ್ಯಕ್ಷರು ನಾರಾಯಣಸ್ವಾಮಿ, ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕಿ ಮಂಜುಳ, ನರೇಗಾ ಸಹಾಯಕ ನಿರ್ದೇಶಕ ಚಂದ್ರಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ನರೇಂದ್ರಕುಮಾರ್, ಆರೋಗ್ಯ ಇಲಾಖೆಯ ದೇವರಾಜ್, ಸಮುದಾಯದ ಮುಖಂಡರಾದ ರಾಜಣ್ಣ, ಪ್ರತಾಪ್, ಯುವ ಪತ್ರಕರ್ತ ಲಿಯೋ ಲೋಕೇಶ್, ಅರವಿಂದ್, ನಾರಾಯಣಸ್ವಾಮಿ, ಇತರರು ಹಾಜರಿದ್ದರು.

# ಕೋಮನೂರು ಗ್ರಾಮದ ತಾಯಿ, ಮಗಳು ಕಾಣೆ: ಪತ್ತೆಗೆ ಮುದಗಲ್ ಪೊಲೀಸರ ಮನವಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಲಿಂಗಸುಗೂರು ತಾಲೂಕಿನ ಮುದಗಲ್ ಪೊಲೀಸ್ ಠಾಣೆ ವ್ಯಾಪ್ತಿಯ ಕೋಮನೂರು ಗ್ರಾಮದ ಹೊಳಿಯಮ್ಮ ಗಂಡ ಯಮನೂರಪ್ಪ ಪೂಜಾರಿ (35) ಹಾಗೂ 2 ವರ್ಷ ವಯೋಮಾನದ ಗಂಗಮ್ಮ ತಂದೆ ಯಮನೂರಪ್ಪ ಪೂಜಾರಿ ಎನ್ನುವ ತಾಯಿ ಹಾಗೂ ಮಗಳು ಕಾಣೆಯಾಗಿದ್ದು, ಈ ಕುರಿತು ಮುದಗಲ್ ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ: 150/2025**



**ಕಲಂ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.**

ದಿನಾಂಕ 05–10–2025ರಂದು ಬೆಳಿಗ್ಗೆ 6 ಗಂಟೆಗೆ ಮುದಗಲ್ ಸಂತೆಗೆ ಹೋಗಿದ್ದೆ. ಕುರಿ ಸಂತೆ ಮುಗಿಸಿ ಮರಳಿ ಮಧ್ಯಾಹ್ನ 12 ಗಂಟೆಗೆ ಮನೆಗೆ ಬಂದಾಗ ಮನೆಯಲ್ಲಿ ಹೆಂಡತಿ ಮತ್ತು ಮಗಳು ಇರಲಿಲ್ಲ. ಮನೆಯಲ್ಲಿದ್ದ ಮಗನಿಗೆ ಕೇಳಿದಾಗ ಕೋಡಿಹಾಳದ ಆಸ್ಪತ್ರೆಗೆ ಹೋಗುವುದಾಗಿ ಅವ್ವ ಹೇಳಿ ಹೋದಳು ಎಂದು ತಿಳಿಸಿದ್ದಾನೆ. ರೋಡಲಬಂಡ, ಕಮಲದಿನ್ನಿ, ತೊಂಡಿಹಾಳ ಎಲ್ಲ ಕಡೆಗೆ ಹುಡುಕಾಡಿದರು ಹೆಂಡತಿ ಮತ್ತು ಮಗಳು ಪತ್ತೆಯಾಗಿರುವುದಿಲ್ಲ ಎಂದು ಹೊಳಿಯಮ್ಮ ಅವರ ಗಂಡ ಯಮನೂರಪ್ಪ ತಂದೆ ಲಕ್ಕಪ್ಪ ಪೂಜಾರಿ ಅವರು 12–10–2025ರಂದು ದೂರು ದಾಖಲಿಸಿದ್ದಾರೆ.

ಕಾಣೆಯಾದ ಈ ಮಹಿಳೆ ಮತ್ತು ಎರಡು ವರ್ಷದ ಮಗುವಿನ ಬಗ್ಗೆ ಮಾಹಿತಿ ಸಿಕ್ಕಲ್ಲಿ ಮುದಗಲ್ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08537–280536, ಪಿಎಸ್ಐ ಮೊಬೈಲ್ ಸಂಖ್ಯೆ: 9480803857, ಮಸ್ಕಿ ವೃತ್ತ ಸಿಪಿಐ ಮೊಬೈಲ್ ಸಂಖ್ಯೆ: 9480803834, ಲಿಂಗಸುಗೂರು ಡಿಎಸ್‌ಪಿ ಮೊಬೈಲ್ ಸಂಖ್ಯೆ: 9480803821ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮುದಗಲ್ ಪೊಲೀಸ್ ಠಾಣೆ ಆರಕ್ಷಕ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ವಿವಿಧ ಬೇಡಿಕೆ ಈಡೇರಿಕೆಗಾಗಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಧರಣಿ ಸತ್ಯಾಗ್ರಹ

ನೈಜ್ಯ ದೆಸೆ ನ್ಯೂಸ್

**ದಾದಾಸಾಹೇಬ್ ಡಾ.ಎನ್ ಮೂರ್ತಿಯವರ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ತಾಲೂಕಾ ಸಮಿತಿಯಿಂದ**

**ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ನಗರದ ತಾಲೂಕು ಪಂಚಾಯತಿ ಮುಂದೆ ಮಂಗಳವಾರ ಧರಣಿ ಸತ್ಯಾಗ್ರಹ ನಡೆಸಲಾಯಿತು.**

ಸಿಂಧನೂರು ತಾಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಚರಂಡಿ, ವಿದ್ಯುತ್ ದೀಪ, ಕುಡಿಯುವ ನೀರಿನ ಅನುಕೂಲ, ಇಲ್ಲದೆ ಜನರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಗ್ರಾ.ಪಂ.ಪಿಡಿಒ ಗಳು ಚರಂಡಿ ಸ್ವಚ್ಛಗೊಳಿಸಲಾಗಿದೆ ಎಂದು 15ನೇ ಹಣಕಾಸಿನ ಅನುದಾನವನ್ನು ದುರುಪಯೋಗ ಮಾಡಿಕೊಂಡಿದ್ದಾರೆ ಆದರೆ ಚರಂಡಿಗಳು ಸ್ವಚ್ಛತೆ ಇಲ್ಲದೆ, ನಗರ ಸೇರಿದಂತೆ ಗ್ರಾಮೀಣ



ಭಾಗದಲ್ಲಿ ಗಬ್ಬು ನಾರುತ್ತೀವೆ. ಇದರಿಂದಾಗಿ ಹಲವಾರು ರೋಗಗಳು ಬರುವ ಸಾಧ್ಯತೆ ಇದೆ. 15ನೇ ಹಣಕಾಸು ಯೋಜನೆ ಅಡಿಯಲ್ಲಿ ಚರಂಡಿಗಳು ಸ್ವಚ್ಛಗೊಳಿಸಲು ತೆಗೆದುಕೊಂಡ ಕಾಮಗಾರಿಗಳ ಬಗ್ಗೆ ಸಂಪೂರ್ಣವಾಗಿ ತನಿಖೆ ಮಾಡಿ ತಪ್ಪಿತಸ್ಥ ಅಧಿಕಾ–ರಿಗಳ ಮೇಲೆ ಕ್ರಮ ಕೈಗೊಳ್ಳಬೇಕು.

ಶುದ್ಧ ಕುಡಿವ ನೀರಿನ ಯೋಜನೆಯಾದ ಜೆ.ಜೆ.ಎಂ ಕಾಮಗಾರಿ ತಪಾಸಣೆ ನಡೆಸಬೇಕು. ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಲ್ಲಿ ನಡೆದ ಭ್ರಷ್ಟಾಚಾರ ತನಿಖೆ ನಡೆಸಬೇಕು ಪಿಡಿಒ, ಕಾರ್ಯದರ್ಶಿಗಳು, ಸಿಬ್ಬಂದಿಗಳು, ತಮಗೆ ವಹಿಸಿದ ಕೇಂದ್ರ ಸ್ಥಾನದಲ್ಲಿ ವಾಸ ಮಾಡಬೇಕು. ತಾಲ್ಲೂಕಿನ ಲೆಕ್ಕ ಪರಿಶೋಧನಾ ಮಾಡುವ ಅದಿಕಾರಿಗಳು ಸರಿಯಾಗಿ ತಪಾಸಣೆ ಮಾಡದೆ ತಪ್ಪು ವರದಿ ನೀಡುವ ಅಧಿಕಾರಿಗಳ ಮೇಲೆ ಕ್ರಮಕೈಗೊಳ್ಳಬೇಕು. ವಿವಿಧ ಗ್ರಾಮಗಳಲ್ಲಿ ಬಾಡಿಗೆ ಕಟ್ಟಡಗಳಲ್ಲಿ ನಡೆಯವ ಅಂಗನವಾಡಿ ಕೇಂದ್ರಗಳ ಬಾಡಿಗೆಯಲ್ಲಿ ಅಧಿಕಾರಿಗಳು ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಿ ಹಣ ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ.

ಆದರೆ ಅನೇಕ ಗ್ರಾಮಗಳಲ್ಲಿ ಟಿನ್ ಶೆಡ್ ಗಳಲ್ಲಿ ಅಂಗನವಾಡಿ ಕೇಂದ್ರಗಳು ನಡೆಯುತ್ತಿವೆ. ಹೀಗೆ ಅನೇಕ ಬೇಡಿಕೆಗಳನ್ನು ಈಡೆರಿಸುವಂತೆ ಅಗ್ರಹಿಸಿ ಧರಣಿ ಸತ್ಯಾಗ್ರಹ ನಡೆಸಿದರು. ಧರಣಿ ಸತ್ಯಾಗ್ರಹದಲ್ಲಿ ಮುಖಂಡರಾದ ಅಶೋಕ ನಂಜಲದಿನ್ನಿ, ನೀರುಪಾದೆಪ್ಪ ಎಲೆಕೂಡ್ಲಿಗಿ, ಮೌನೇಶ ದಿದ್ದಿಗಿ, ಛತ್ರಪ್ಪ, ಶಿವಲಿಂಗ, ಹನುಮಂತ, ವಿಜಯಲಕ್ಷ್ಮಿ, ಮಲ್ಲಿಕಾರ್ಜುನ, ಈಶಪ್ಪ, ಬೀರಪ್ಪ, ವೀರೇಶ, ಬಾಲಪ್ಪ, ವಿರುಪಮ್ಮ, ಲಕ್ಷ್ಮಿ ಪತ್ತಾರ್, ಸೇರಿಂದತೆ ಇನ್ನಿತರರು ಧರಣಿ ಸತ್ಯಾಗ್ರಹದಲ್ಲಿ ಪಾಲ್ಗೊಂಡಿದ್ದರು.

# ಆರ್.ಜಿ.ಮೆಲೋಡಿಸ್ ಸ್ಟುಡಿಯೋದಲ್ಲಿ ಏಂಟದೆ ಭಂಟ ಸಂಗೊಳ್ಳಿ ರಾಯಣ್ಣನ ಧ್ವನಿ ಸುರುಳಿ ಬಿಡುಗಡೆ

ನೈಜ್ಯ ದೆಸೆ ನ್ಯೂಸ್

**ನಗರದ ಬಸವೇಶ್ವರ ವೃತ್ತದ ಹತ್ತಿರವಿರುವ ಆರ್.ಜಿ.ಮೆಲೋಡಿಸ್ ಕರೋಕೆ ಸ್ಟುಡಿಯೋದಲ್ಲಿ ಸಾಹಿತಿ ಬಸವರಾಜ ಗಾಳಿ ಇವರು ರಚಿಸಿದ ಸಂಗೊಳ್ಳಿ ರಾಯಣ್ಣನ ಕುರಿತಾದ ಸಾಹಿತ್ಯವನ್ನು ತಾಲೂಕಿನ ಗೌಡನಭಾವಿಯ ಗ್ಯಾಂಗ್ ಮನ್ ಬಸಪ್ಪ ಇವರ ಧ್ವನಿಯಲ್ಲಿ ಮೂಡಿಬಂದ ಧ್ವನಿಸುರುಳಿಯ ಧ್ವನಿ ಮುದ್ರಣವನ್ನು ಬಿಜೆಪಿಯ ನಗರ ಮಂಡಲದ ಅಧ್ಯಕ್ಷರಾದ ಸಿದ್ರಾಮೇಶ ಮನ್ನಾಪೂರು ಬಿಡುಗಡೆ ಗೊಳಿಸಿದರು.**

ನಂತರ ಮಾತನಾಡಿ, ಸಂಗೊಳ್ಳಿ ರಾಯಣ್ಣನವರ ವಿಚಾರಗಳು ಅವರು ನಡೆದ ಬಂದ ಕಷ್ಟದ ಆದಿಯ ಬಗ್ಗೆ ಹಂಚಿಕೊಂಡು ದೇಶಕ್ಕೆ



ಸ್ವಾತಂತ್ರ್ಯ ಕೊಡಿಸುವ ಗಟ್ಟಿಮನಸ್ಸಿನ ಏಂಟದೆ ಭಂಟನ ಸಾಹಸಗಾಥೆ ತುಂಬ ದೊಡ್ಡದಿದೆ. ಕಿತ್ತೂರು ರಾಣಿ ಚನ್ನಮ್ಮನ ಮಗನಾಗಿ ಕಿತ್ತೂರಿಗೆ ಸ್ವಾತಂತ್ರ್ಯ ತಂದು ಕೊಟ್ಟ ಪರಾಕ್ರಮಿ ಧೀರ, ಬಿಚ್ಚುಗತ್ತಿಯ ವೀರ, ಇವರು ಕೇವಲ ಒಂದು ಜಾತಿಗೆ ಸೀಮಿತವಾದವರಲ್ಲ ಸ್ವಾತಂತ್ರ್ಯ ಸಿಕ್ಕಿದ್ದು, ಜಾತಿ ಹೋರಾಟಗಳಿಂದಲ್ಲ. ಈ ದೇಶದ ಸ್ವಾಭಿಮಾನದ ಕಿಚ್ಚು ಹಚ್ಚಿಕೊಂಡ ವೀರ ಶೂರರಿಂದ ಸ್ವಾತಂತ್ರ್ಯಕ್ಕಾಗಿ ಹಗಲಿರುಳು ಶ್ರಮಿಸಿದ ರಾಯಣ್ಣನನ್ನು ತಮ್ಮ ಬರವಣಿಗೆ ಮೂಲಕ ಹಿತನುಡಿಗಳಲ್ಲಿ ಸ್ಮರಿಸುತ್ತಾ ಅಂತಹ ಮಹಾನ್ ವ್ಯಕ್ತಿಯ ಗೀತೆ ರಚನಾಕಾರರಿಗೂ ಗಾಯಕರಿಗೂ ಅಭಿನಂದನೆಗಳು ಸಲ್ಲಿಸಿದರು.

ತದನಂತರ ನಿವೃತ್ತ ಶಿಕ್ಷಕರಾದ ವೆಂಕನಗೌಡ ವಟಗಲ್ ಮಾತಾನಾಡಿ, ಸಿಂಧನೂ–ರಿನಲ್ಲಿ ಸಂಗೀತ, ಸಾಹಿತ್ಯ, ಶಿಕ್ಷಣ, ಹಾಗೂ ಇತರೆ ಎಲ್ಲಾ ಕ್ಷೇತ್ರದಲ್ಲಿ ಪ್ರತಿಭೆಗಳಿವೆ ಸಮಯಕ್ಕೆ ಸರಿಯಾಗಿ ಮಾರ್ಗದರ್ಶನ ಸಲಹೆ ಸಹಕಾರ ಕಲಾವಿದರಿಗೆ ಬೇಕಾಗಿದೆ. ಹಳ್ಳಿಪ್ರತಿಭೆಗಳು ಪಟ್ಟಣದಲ್ಲಿ ಗೂಡು ಕಟ್ಟಿಕೊಳ್ಳಲು ಹಳ್ಳಿಯಿಂದ ದಿಲ್ಲಿಯವರೆಗೆ ತಮ್ಮ ಪ್ರತಿಭೆಯ ಪ್ರದರ್ಶನಕ್ಕಾಗಿ ಹರಸಹಾಸ ಮಾಡುತ್ತಿದ್ದಾರೆ. ಸಂಗೀತ ಸಾಹಿತ್ಯ ಕಲೆಯ ಆಸಕ್ತರಿಗೆ ನೆರವು ನೆರಳು ಬೇಕಾಗಿದೆ. ಸಂಬಂಧಿಸಿದ ಅಧಿಕಾರಿಗಳು ಜನಪ್ರತಿನಿಧಿಗಳು ಗಮನ ಹರಿಸಬೇಕು ಎಂದರು.

ಈ ಸಂದರ್ಭದಲ್ಲಿ: ಮುಖಂಡರಾದ ಶೇಖರಪ್ಪ ಸುಕಾಲಪೇಟೆ, ಆರ್.ಜಿ.ಮೆಲೋಡಿಸ್ ಕರೋಕೆ ಸ್ಟುಡಿಯೋ ಸಂಸ್ಥಾಪಕರಾದ ಉಮಾ ವೀರೇಶ ದೇವರಮನಿ, ನರಸಮ್ಮ, ಭಜನಾ ಕಲಾವಿದರಾದ ತಿಮ್ಮಣ್ಣ ಸಾಗರಕ್ಯಾಂಪ್, ಅಮರೇಶ ದಿದ್ದಿಗಿ, ಬಸವರಾಜ ಕೋಳಬಾಳ, ರಮೇಶ, ಗುರುರಾಜ, ಶ್ಯಾಮೀದ್, ಸಲೀಮ್, ಖಾಸಿಂ, ಮಲ್ಲಯ್ಯಸ್ವಾಮಿ ಮುಳ್ಳೂರು, ಸೇರಿದಂತೆ ಅನೇಕ ಕಲಾವಿದರು, ಹಿರಿಯರು ಭಾಗವಹಿಸಿದ್ದರು. ವೀರೇಶ ದೇವರಮನಿ ನಿರೂಪಿಸಿದರು.